# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 237
Volume - 01 Issue - 237
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269
Title- Code: KARKAN 28269
ಚಿತ್ರದುರ್ಗ
Chitradurga
ದಿನಾಂಕ: 08–04–2024 ಸೋಮವಾರ
Date: 08-04-2024 Monday
ಪುಟ: 4
Page: 4
ಬೆಲೆ : ರೂ.2–00
Price: Rs. 2-00



**ಒಳಪುಟದ ಸುದ್ದಿಗಳು**

ಕಾಂಗ್ರೆಸ್ ವಿಜಯಕ್ಕೆ ಎಲ್ಲರೂ ಕೈಜೋಡಿಸಿ: ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ 2

ಈ ಓಟರ್ಸ್ ಸಭೆ ನಡೆಸಿದ ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳ 3

ಭದ್ರಾ ನೀರು ಹರಿಸಲು ಕ್ರಮ ಕೈಗೊಳ್ಳಿ: ಪುರುಷೋತ್ತಮಾನಂದ ಪುರಿ ಸ್ವಾಮೀಜಿ 4



ಸುದ್ದಿ, ಜಾಹಿರಾತಿಗೆ
9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಗ್ಯಾರೆಂಟಿ ನಮಗೆ ಶಕ್ತಿತುಂಬಿದ್ದು, ರಾಜ್ಯದಲ್ಲಿ 20 ಸ್ಥಾನ ಕಾಂಗ್ರೆಸ್ ಪಾಲಿಗೆ: ಟಿ.ರಘುಮೂರ್ತಿ ವಿಶ್ವಾಸ

» ನಮ್ಮ ಜನ ಸಮಾಚಾರ

ಚಳ್ಳಕೆರೆ: ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಹ್ಯಾಟ್ರಿಕ್ ಸಾಧನೆಗೈದ ಏಕೈಕ ಶಾಸಕ ಟಿ.ರಘುಮೂರ್ತಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿ.ಎನ್.ಚಂದ್ರಪ್ಪ ಲಕ್ಷಾಂತರ ಮತಗಳ ಅಂತರದಲ್ಲಿ ಜಯಗಳಿಸುವರು. ಕಳೆದ ಹತ್ತು ತಿಂಗಳ ಅವಧಿಯಲ್ಲಿ ರಾಜ್ಯ ಸರ್ಕಾರ ರಾಜ್ಯದ ಜನತೆಗೆ ನೀಡಿದ ಐದು ಪ್ರಮುಖ ಗ್ಯಾರಂಟಿಗಳು 28 ಸ್ಥಾನಗಳಲ್ಲಿ 20 ಸ್ಥಾನಗಳನ್ನು ಕಾಂಗ್ರೆಸ್ ಪಕ್ಷಕ್ಕೆ ತಂದುಕೊಡಲಿವೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಲೋಕಸಭಾ ಚುನಾವಣೆಗೆ ದಿನಾಂಕ ಪ್ರಕಟವಾದ ನಂತರ ಮೊದಲಬಾರಿಗೆ ನಿವಾಸದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಹಲವಾರು ಶಾಶ್ವತ ಯೋಜನೆಗಳಿಗೆ ಕಾಂಗ್ರೆಸ್ ನೇತೃತ್ವದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್



ಹಣ ಬಿಡುಗಡೆ ಮಾಡಿದ್ದಾರೆ. ರಾಜ್ಯದ ಬರಗಾಲ ಪರಿಸ್ಥಿತಿಯನ್ನು ನಿಬಾಯಿಸಲು ಕೇಂದ್ರ ಸರ್ಕಾರ ಹಣ ನೀಡದಿದ್ದರೂ ಸಹ ರಾಜ್ಯದ ಜನತೆಗೆ ನೆರವಾಗಿದ್ದಾರೆ. ಗ್ರಾಮೀಣ ಪ್ರದೇಶದಲ್ಲಿ ಜಾನುವಾರ ರಕ್ಷಣೆಗೆ ಗೋಶಾಲೆ ಪ್ರಾರಂಭ ಮಾಡಿದೆ, ಜಿಲ್ಲೆಯ ಐದು ಶಾಸಕರು ಉಸ್ತುವಾರಿ ಡಿ.ಸುಧಾಕರ್ ನೇತೃತ್ವದಲ್ಲಿ ಪಕ್ಷದ ಗೆಲುವಿಗಾಗಿ ಶ್ರಮಿಸುತ್ತಿದ್ದೇವೆ. ತುಂಗಾಹಿನ್ನೀರು ಯೋಜನೆ ಜಾರಿಗೆ 280 ಕೋಟಿ ಹಣವನ್ನು ಬಿಡುಗಡೆ ಮಾಡಿದ್ದು, ಇನ್ನೂ ಎರಡ್ಮೂರು ತಿಂಗಳಲ್ಲಿ ಈ ಯೋಜನೆ ಜಾರಿಯಾಗಿ ಶಾಶ್ವತ ಕುಡಿಯುವ ನೀರಿನ ಸೌಲಭ್ಯ ಕೂಡ್ಲಗಿ, ಮೊಳಕಾಲ್ಮೂರು, ಚಳ್ಳಕೆರೆ ಜನತೆಗೆ ಸಿಗಲಿದೆ ಎಂದರು.

ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿಗೆ 9 ಸಾವಿರ ಕೋಟಿ ಹಣ ವೆಚ್ಚಮಾಡಿದ್ದು, ಆಪೈಕಿ 4.50 ಸಾವಿರ ಕೋಟಿ ಹಣ ಕಾಂಗ್ರೆಸ್ ನೇತೃತ್ವದ ಸರ್ಕಾರ ಖರ್ಚು ಮಾಡಿದೆ. ರಾಜ್ಯದ ಗ್ಯಾರಂಟಿ ಯೋಜನೆಗಳು ಕಾಂಗ್ರೆಸ್ ಪಕ್ಷಕ್ಕೆ ಜಯತಂದುಕೊಂಡಲಿದ್ದು, ಪಕ್ಷದ ಕಾರ್ಯಕರ್ತರು, ಮುಖಂಡರು, ಅಭ್ಯರ್ಥಿ ಗೆಲುವಿಗೆ ಶ್ರಮಿಸುತ್ತಿದ್ದಾರೆ.

2014ರಿಂದ19ವರೆಗೂ ಈ ಕ್ಷೇತ್ರದ ಸಂಸದರಾಗಿ ಬಿ.ಎನ್.ಚಂದ್ರಪ್ಪ ಉತ್ತಮ ಕೆಲಸ ಮಾಡಿದ್ದಾರೆ, ಕೇಂದ್ರ ಸರ್ಕಾರ ಯಾವುದೇ ಯೋಜನೆಗಳನ್ನು ಬಡಜನತೆಗೆ ನೀಡಿಲ್ಲ, ಕೇವಲ ಸುಳ್ಳು ಆಶ್ವಾಸನೆಗಳ ಮೂಲಕ ಜನರ ಭಾವನೆಯ ಮೇಲೆ ಆಟವಾಡುತ್ತಿದೆ. ಮೋದಿಯವರ ಪ್ರಭಾವ ಕಡಿಮೆಯಾಗುತ್ತಿದ್ದು, ಇದು ಕಾಂಗ್ರೆಸ್ ಪಕ್ಷಕ್ಕೆ ಹೆಚ್ಚು ಅನುಕೂಲವಾಗಲಿದೆ. ರಾಜ್ಯದ ಜನತೆ ಕಾಂಗ್ರೆಸ್ ಪಕ್ಷಕ್ಕೆ ಮತ್ತೊಮ್ಮೆ ಅಧಿಕಾರ ತಂದುಕೊಡಲು ತುದಿಗಾಲಮೇಲೆ ನಿಂತಿದ್ದಾರೆ. ಎರಡು ಹಂತಗಳಲ್ಲಿ ಚುನಾವಣೆ ನಡೆದರೂ ಅದರಲ್ಲಿ ಹೆಚ್ಚಿನ ಸ್ಥಾನಗಳಲ್ಲಿ ಕಾಂಗ್ರೆಸ್ ಪಕ್ಷ ಜಯಸಾಧಿಸಲಿದೆ ಎಂದರು.

ಕಾಂಗ್ರೆಸ್ ಪಕ್ಷದ ಭವಿಷ್ಯದ ನಾಯಕ ರಾಹುಲ್‌ಗಾಂಧಿ ಎರಡು ಬಾರಿ ಭಾರತ್‌ಜೋಡೊ ನಡೆಸಿ ಪಕ್ಷವನ್ನು ಜನರತ್ತ ತೆಗೆದುಕೊಂಡು ಹೋಗುವಲ್ಲಿ ಯಶಸ್ವಿಯಾಗಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಟಿ.ಪ್ರಭುದೇವ್, ಕೆಎಂಎಫ್ ನಿರ್ದೇಶಕ ಸಿ.ವೀರಭದ್ರಬಾಬು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಜಿ.ಟಿ.ಶಶಿಧರ, ನೇತಾಜಿಪ್ರಸನ್ನ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಹೊರ ರಾಜ್ಯ ಹಾಗೂ ಹೊರ ಜಿಲ್ಲೆಗಳಿಗೆ ಮೇವು ಸಾಗಾಟ ನಿಷೇಧ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯ ಎಲ್ಲಾ ಆರು ತಾಲ್ಲೂಕುಗಳನ್ನು ತೀವ್ರ ಬರ ಪೀಡಿತ ಪ್ರದೇಶವೆಂದು ಸರ್ಕಾರ ಘೋಷಿಸಿದೆ. ಪ್ರಸ್ತುತ ಜಿಲ್ಲೆಯಲ್ಲಿ ಬರದ ತೀವ್ರತೆ ಅಧಿಕವಾಗಿದೆ. ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗಬಹುದು. ಈ ಪರಿಸ್ಥಿತಿ ನಿಭಾಯಿಸಲು ಜಿಲ್ಲಾ ವ್ಯಾಪ್ತಿಯಲ್ಲಿ ಉತ್ಪಾದನೆಯಾಗುವ ಎಲ್ಲಾ ವಿಧದ ಹಸಿರು, ಒಣ ಹಾಗೂ ಸಂಸ್ಕರಿಸಿದ ಮೇವನ್ನು ಜಿಲ್ಲಾ ವ್ಯಾಪ್ತಿಯನ್ನು ಹೊರತುಪಡಿಸಿ ಹೊರ ಜಿಲ್ಲೆಗಳಿಗೆ ಸಾಗಾಣಿಕೆ ಮಾಡುವುದನ್ನು ನಿಷೇಧಿಸಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಕ್ಷಣದಿಂದಲೇ ಜಾರಿಗೆ ಬರುವಂತೆ ಆದೇಶ ಮಾಡಿದ್ದಾರೆ. ಈಗಾಗಲೇ ರಾಜ್ಯ ಸರ್ಕಾರ ಹೊರ ರಾಜ್ಯಗಳಿಗೆ ಮೇವು ಸಾಗಾಣಿಕೆ ಮಾಡದಂತೆ ನಿಷೇಧಿಸಿ ನವೆಂಬರ್ 2023ರಲ್ಲಿಯೇ ಆದೇಶ ಹೊರಡಿಸಿದೆ.

## ಚೆಕ್‌ಡ್ಯಾಂಗೆ ಈಜಲು ಹೋದ ಯುವಕ ಸಾವು



» ಚಳ್ಳಕೆರೆ

ತಾಲ್ಲೂಕಿನ ಹುಲಿಕುಂಟೆ ಗ್ರಾಮದ ಯುವಕ ಪ್ರಹ್ಲಾದ್(28) ಈಜಿನಲ್ಲಿ ಪರಿಣಿತಿ ಹೊಂದಿದ್ದು, ತಮ್ಮ ಗ್ರಾಮದ ಸಮೀಪವಿರುವ ಗೊರ್ಲತ್ತು ಗ್ರಾಮದ ಚೆಕ್‌ಡ್ಯಾಂಗೆ ಶುಕ್ರವಾರ ಮಧ್ಯಾಹ್ನ ತೆರಳಿದ್ದು, ಎರಡ್ಮೂರು ಬಾರಿ ಏರಿಯಿಂದ ನೀರಿಗೆ ಹಾರಿ ಈಜಾಡಿ ಹೊರಬಂದಿದ್ದ.

ಆದರೆ,ಮತ್ತೊಮ್ಮೆಈಜಾಡುವಉದ್ದೇಶದಿಂದಏರಿಯಿಂದ ಕೆಳಗೆ ಹಾರಿದ ಪ್ರಹ್ಲಾದ್ ಬಹಳ ಹೊತ್ತಾದರೂ ಮೇಲೆ ಬಾರದ ಕಾರಣ ಅಲ್ಲೇ ಈಜಾಡುತ್ತಿದ್ದ ಕೆಲವು ಯುವಕರು ಪ್ರಹ್ಲಾದ್ ಕಾಣದಿಂದಾಗ ಗಾಬರಿಗೊಂಡರು. ಕೂಡಲೇ ಗ್ರಾಮಸ್ಥರಿ, ಪೊಲೀಸರಿಗೆ ಮಾಹಿತಿ ನೀಡಿದರು.ಸಂಜೆಯ ತನಕ ಅಗ್ನಿಶಾಮಕ ಪಡೆ, ಪೊಲೀಸ್ ಇಲಾಖೆ ಚೆಕ್ ಡ್ಯಾಂ ನೀರಿನಲ್ಲಿ ಪ್ರಹ್ಲಾದನ ಶವಕ್ಕಾಗಿ ಹುಡುಕಾಟ ನಡೆಸಿದ್ದರು.

ಪುಟ ↘ 2






| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |



| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |



## ಫಾಸ್ಟ್ ನ್ಯೂಸ್

### ಚೆಕ್‌ಡ್ಯಾಂಗೆ ಈಜಲು ಹೋದ ಯುವಕ ಸಾವು

» ಮೊದಲ ಪುಟದಿಂದ



ಶನಿವಾರ ಸಂಜೆ ಪ್ರಹ್ಲಾದನ ಶವ ಡ್ಯಾಂನ ತೂಬಿನ ಬಳಿ ಪತ್ತೆಯಾಗಿದೆ. ಅಗ್ನಿಶಾಮಕ ಪಡೆಯ ಪ್ರಯಾಸದಿಂದ ತೂಬಿನ ಬಳಿ ಸಿಲುಕಿದ್ದ ದೇಹವನ್ನು ಹೊರತಂದಿದ್ದಾರೆ. ಈಜು ಬಂದರೂ ತೂಬಿಗೆ ಸಿಲುಕಿ ಮೃತಪಟ್ಟಿರುತ್ತಾನೆ. ಚಳ್ಳಕೆರೆ ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ. ಮಾಹಿತಿ ಪಡೆದ ಶಾಸಕ ರಘುಮೂರ್ತಿ ಗ್ರಾಮಕ್ಕೆ ತೆರಳಿ ಮೃತನ ಅಂತಿಮ ದರ್ಶನ ಪಡೆದು ಕುಟುಂಬಕ್ಕೆ ಸಂತ್ವಾನ ತಿಳಿಸಿದ್ದಾರೆ.

### ಬಾಗೂರು ಮೈಲಾರಲಿಂಗೇಶ್ವರ ಸ್ವಾಮಿಗೆ ಸಂಭ್ರಮದ ಮಂಡಲ ಪೂಜೆ ಸ್ವಾಮಿ



» ಹೊಸದುರ್ಗ

ತಾಲ್ಲೂಕಿನ ಬಾಗೂರಿನಲ್ಲಿ ನೆಲೆಸಿರುವ ಮೈಲಾರಲಿಂಗೇಶ್ವರ ಸ್ವಾಮಿ ದೇವಾಲಯದ ನೂತನ ಪ್ರಾರಂಭೋತ್ಸವ ಫೆ. 19 ರಂದು ನೆರವೇರಿತ್ತು. ಶುಕ್ರವಾರ 48 ದಿನದ ಮಂಡಲಪೂಜೆ ಅತ್ಯಂತ ವೈಭವಯುತ ನಡೆಯಿತು. ಮಂಡಲಪೂಜೆ ಅಂಗವಾಗಿ ಶುಕ್ರವಾರ ಬೆಳಿಗ್ಗೆ 6 ಗಂಟೆಗೆ ಗಂಗಾಪೂಜೆ ನಡೆಯಿತು. ನಂತರ ಗಣಪತಿ ಪೂಜೆ, ಪುಣ್ಯಾಹವಾಚನ, ಮಂಡಲದೇವತಾ, 48 ಕಳಶಗಳ ಸ್ಥಾಪನೆ, ಅಗ್ನಿಸ್ಥಾಪನೆ, ಗಣಪತಿ, ಪಂಚಬ್ರಹ್ಮ, ಅಷ್ಟದಿಕ್ಪಾಲಕ, ಮೃತ್ಯುಂಜಯ ಪೂಜೆ, ಹೋಮ, ಪೂರ್ಣಾಹುತಿ, ಕುಂಭಾಬಿಷೇಕ, ಪಂಚಾಮೃತಾಭಿಷೇಕ ನಡೆಯಿತು ನಂತರ ಮಹಾಮಂಗಳಾರತಿ ಕಾರ್ಯ ನಡೆಯಿತು. ದೇವಾಲಯ ಪ್ರಾರಂಭೋತ್ಸವ ನಡೆದಾಗಿನಿಂದಲೂ ನಿತ್ಯ ದೇವರಿಗೆ ವಿಶೇಷ ಪೂಜೆ, ಅಭಿಷೇಕ, ಅಲಂಕಾರ ಮಾಡುವುದರ ಮೂಲಕ ದಿನದ 24 ಗಂಟೆಯೂ ದೇವರ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿತ್ತು. ಭಕ್ತಾದಿಗಳು ನಿತ್ಯ ದರ್ಶನ ಪಡೆಯುತ್ತಿದ್ದರು. ಪ್ರತಿ ಭಾನುವಾರ ವಿಶೇಷ ಪೂಜಾ ಕಾರ್ಯಗಳು ನಡೆದಿವೆ ಎಂದು ಧರ್ಮದರ್ಶಿಗಳು ಮಾಹಿತಿ ನೀಡಿದರು.

### ೯ ರಂದು ಕಾಳಿಕಾದೇವಿ ರಥೋತ್ಸವ



» ದಾವಣಗೆರೆ

ಕಾಳಿಕಾದೇವಿ ರಸ್ತೆಯಲ್ಲಿರುವ ಶ್ರೀ ಕಾಳಿಕಾದೇವಿ ವಿಶ್ವಕರ್ಮ ದೇವಸ್ಥಾನದಲ್ಲಿ 8 ರ ಸೋಮವಾರ ಯುಗಾದಿ ಅಮಾವಾಸ್ಯೆ ದಿನದಂದು ಬೆಳಿಗ್ಗೆ ಪಂಚಾಮೃತ ಅಭಿಷೇಕ, ಪುಷ್ಪಾಲಂಕಾರ ಮತ್ತು ಗೋಧಿ ಉಡಿ ತುಂಬುವುದು, ನಂತರ ಮಂಗಳಾರತಿ ತೀರ್ಥ ಪ್ರಸಾದ ವಿನಿಯೋಗವಿರುತ್ತದೆ. 9 ರ ಮಂಗಳವಾರ ಯುಗಾದಿ ಪಾಡ್ಯದಂದು ಬೆಳಿಗ್ಗೆ ಪಂಚಾಮೃತ ಅಭಿಷೇಕ, ಪುಷ್ಪಾಲಂಕಾರ, ಮಂಗಳಾರತಿ, ಸಂಜೆ 6.30ಕ್ಕೆ ಚಾಂದ್ರಮಾನ ಯುಗಾದಿ ಪ್ರಯುಕ್ತ ಶ್ರೀ ಕಾಳಿಕಾದೇವಿ ರಥೋತ್ಸವವನ್ನು ದೇವಸ್ಥಾನದಿಂದ ರಾಜಬೀದಿಗಳಲ್ಲಿ ನೆರವೇರಿಸಲಾಗುವುದು. ರಥೋತ್ಸವವು ದೇವಸ್ಥಾನಕ್ಕೆ ಬಂದ ನಂತರ ಮಹಾಮಂಗಳಾರತಿ, ಬೇವು-ಬೆಲ್ಲದ ಪ್ರಸಾದವನ್ನು ವಿತರಿಸಲಾಗುವುದು ಎಂದು ಶ್ರೀ ಕಾಳಿಕಾದೇವಿ ವಿಶ್ವಕರ್ಮ ದೇವಸ್ಥಾನ ಆಡಳಿತ ಸಮಿತಿ ಟ್ರಸ್ಟ್ ತಿಳಿಸಿದೆ.

# ಕಾಂಗ್ರೆಸ್ ವಿಜಯಕ್ಕೆ ಎಲ್ಲರೂ ಕೈಜೋಡಿಸಿ: ಚಂದ್ರಪ್ಪ





» ಚಳ್ಳಕೆರೆ

ಸುಳ್ಳು ಆಶ್ವಾಸನೆಗಳ ಮೂಲಕ ಜನರ ಭಾವನೆಗಳೊಂದಿಗೆ ಚೆಲ್ಲಾಡವಾಡುತ್ತಾ ಕಳೆದ ಹತ್ತು ವರ್ಷಗಳಿಂದ ರಾಷ್ಟ್ರದಲ್ಲಿ ಆಡಳಿತ ನಡೆಸಿದ ಎನ್‌ಡಿಎ ನೇತೃತ್ವದ ಸರ್ಕಾರ ಪ್ರಧಾನಮಂತ್ರಿ ನರೇಂದ್ರಮೋದಿಯವರಿಗೆ ಈ ಬಾರಿಯ ಅವರ ಹುಸಿ ಭರವಸೆ ಕೈಕೊಡಲಿದ್ದು, ಕಾಂಗ್ರೆಸ್ ನೇತೃತ್ವದ ಸರ್ಕಾರ(ಇಂಡಿಯಾಕೂಟ) ಅಧಿಕಾರ ಪಡೆಯುವ ಎಲ್ಲಾ ಲಕ್ಷಣಗಳು ಸ್ಪಷ್ಟವಾಗಿವೆ ಎಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ತಿಳಿಸಿದರು.

ಡಿ.ವೀರಣ್ಣ ಲೇಔಟ್‌ನಲ್ಲಿರುವ ಶಾಸಕ ಕಚೇರಿಯಲ್ಲಿ ಪ್ರಸ್ತುತ ಲೋಕಸಭಾ ಚುನಾವಣೆಯ ಕಾಂಗ್ರೆಸ್ ಪಕ್ಷದ ಭರವಸೆಗಳ ಪ್ರತಿಯನ್ನು ಬಿಡುಗಡೆ ಮಾಡಿ ಮಾತನಾಡಿದರಲ್ಲದೆ, ವಿವಿಧ ಪಕ್ಷಗಳಿಂದ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದವರನ್ನು ಸಹ ಸ್ವಾಗತಿಸಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಚಳ್ಳಕೆರೆ ತಾಲ್ಲೂಕು ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ಜೆಡಿಎಸ್ ಬಿಜೆಪಿ ಪಕ್ಷವನ್ನು ತೊರೆದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗುವವರ ಸಂಖ್ಯೆ ಹೆಚ್ಚಿದೆ. ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ತಮ್ಮ ಅಭಿವೃದ್ದಿಯ ಮೂಲಕವೇ ಜನರ ಮನಸು ಗೆದ್ದ ಶಾಸಕ ಟಿ.ರಘುಮೂರ್ತಿ ನೇತೃತ್ವದಲ್ಲಿ ವಿವಿಧ ಪಕ್ಷಗಳ ನೂರಾರು ಮುಖಂಡರು, ಕಾರ್ಯಕರ್ತರು ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ವ್ಯಕ್ತಪಡಿಸಿ ಸೇರ್ಪಡೆಯಾಗುತ್ತಿದ್ದಾರೆ. ಇವರ ಸೇರ್ಪಡೆಯಿಂದ ಕಾಂಗ್ರೆಸ್ ಪಕ್ಷಕ್ಕೆ ಬಲಬಂದಿದೆ. ಲೋಕಸಭಾ ಚುನಾವಣೆಯಲ್ಲೂ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸುವ ನಿಟ್ಟಿನಲ್ಲಿ ದೃಢಹೆಜ್ಜೆ ಇಟ್ಟಿದೆ ಎಂದರು.

ಕಾಂಗ್ರೆಸ್ ಪಕ್ಷ ಅಸಂಘಟಿತ ಕಾರ್ಮಿಕರ ಸಂಘದ ಅಧ್ಯಕ್ಷ ಜಿ.ಸಿ.ಮಂಜುನಾಥ ಮಾತನಾಡಿ, ಕಾಂಗ್ರೆಸ್ ಪಕ್ಷ ಕಳೆದ ಹಲವಾರು ದಶಕಗಳಿಂದ ಬಡವರ ಕಲ್ಯಾಣಕ್ಕಾಗಿ ಶ್ರಮಿಸಿದ ಏಕೈಕ ಪಕ್ಷವಾಗಿದೆ ಎಂದರು. ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ, ಜಿಲ್ಲಾ ಕೆಪಿಸಿಸಿ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಮಾತನಾಡಿ, ಲೋಕಸಭೆ ಚುನಾವಣೆಗೆ ದಿನಾಂಕ ಪ್ರಕಟವಾದಾಗಿನಿಂದಲೂ ಕಾಂಗ್ರೆಸ್ ಪಕ್ಷಕ್ಕೆ ಎಲ್ಲೆಡೆ ಅಭೂತಪೂರ್ವ ಬೆಂಬಲ ದೊರೆಯುತ್ತಿದೆ. ನಿಮ್ಮೆಲ್ಲರ ಶುಭಹಾರೈಕೆಯಿಂದ ಬಿ.ಎನ್. ಚಂದ್ರಪ್ಪ ಮತ್ತೊಮ್ಮೆ ಈ ಕ್ಷೇತ್ರದಿಂದ ಆಯ್ಕೆಯಾಗುವರು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಟಿ.ರಘುಮೂರ್ತಿ ಮಾತನಾಡಿ, ಚಳ್ಳಕೆರೆ ನಗರದ ವಿವಿಧ ವಾರ್ಡ್‌ಗಳ ಮುಖಂಡರು, ಗ್ರಾಮೀಣ ಭಾಗಗಳ ಸಾರ್ವಜನಿಕ ಕುಂದುಕೊರತೆ ಬಗ್ಗೆ ಚರ್ಚೆ ನಡೆಸಲು ನಾವೆಲ್ಲಾ ಸೇರಿದ್ದು. ಈ ಸಂದರ್ಭದಲ್ಲಿ ಅಭ್ಯರ್ಥಿ ಚಂದ್ರಪ್ಪನವರೂ ಸಹ ಪ್ರವಾಸ ನಿಮಿತ್ತ ಮೊಳಕಾಲ್ಮೂರಿಗೆ ತೆರಳಬೇಕಿತ್ತು. ಅವರು ಸಹ ಈ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದು ಸಂತಸ ತಂದಿದೆ. ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ನಡೆದ ಕಳೆದ ಹಲವಾರು ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಮುಂಚೂಣಿಯಲ್ಲಿದೆ. ಅದಕ್ಕೆ ನಿಮ್ಮೆಲ್ಲರ ಸಹಕಾರ, ವಿಶ್ವಾಸ, ಪ್ರಾಮಾಣಿಕ ಕಾರ್ಯ ಸಾಕ್ಷಿಯಾಗಿದೆ. ನಿವೆಲ್ಲರೂ ಮತ್ತೊಮ್ಮೆ ದೃಢನಿಶ್ಚಯದಿಂದ ಈ ಬಾರಿ ಕಾಂಗ್ರೆಸ್ ಬೆಂಬಲಿಸಿದರೆ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಎರಡನೇ ಬಾರಿಗೆ ಈ ಜಿಲ್ಲೆಯಿಂದ ಲೋಕಸಭೆ ಪ್ರವೇಶ ಮಾಡುವರು. ನಿಮ್ಮೆಲ್ಲರ ಪ್ರಾಮಾಣಿಕ ಕೆಲಸ ಕಾರ್ಯಗಳ ಮೇಲೆ ಚುನಾವಣೆ ಗೆಲುವು ಆವಲಂಬಿತವಾಗಿದೆ ಎಂದರು.

ಸಭೆಯಲ್ಲಿ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಟಿ.ಪ್ರಭುದೇವ್, ಹಿರಿಯ ವಾಣಿಜ್ಯೋದ್ಯಮಿ ಎಸ್.ರುದ್ರಮುನಿಯಪ್ಪ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಜಿ.ಟಿ.ಶಶಿಧರ, ಕಿರಣ್‌ಶಂಕರ್, ಸಿ.ಟಿ.ಶ್ರೀನಿವಾಸ್, ನೇತಾಜಿ ಪ್ರಸನ್ನ, ಎಸ್.ಎಚ್.ಸೈಯದ್, ಪಿ.ತಿಪ್ಪೇಸ್ವಾಮಿ, ಸೈಪುಲ್ಲಾ, ಚೌಳೂರುಪ್ರಕಾಶ್, ನಟರಾಜು, ಟಿ.ವಿಜಯಕುಮಾರ್, ಸ್ವಾಮಿ, ಟಿ.ಭದ್ರಿ, ಆರ್.ಪ್ರಸನ್ನಕುಮಾರ್, ಎಚ್.ಪ್ರಶಾಂತ್ ಕುಮಾರ್ ಉಪಸ್ಥಿತರಿದ್ದರು.

### ಹೊಸದುರ್ಗ ತಾಲ್ಲೂಕು ಹಳೇ ಕುಂದೂರು ಗ್ರಾಮದಲ್ಲಿ ಘಟನೆ

# ಮಾಂಸಹಾರಿ ಊಟ ಸೇವನೆ: 50ಕ್ಕೂ ಜನ ಅಸ್ವಸ್ಥ



» ಚಿತ್ರದುರ್ಗ

ಹೊಸದುರ್ಗ ತಾಲ್ಲೂಕಿನ ಹಳೇ ಕುಂದೂರು ಗ್ರಾಮದಲ್ಲಿ ಬುಧವಾರ ಸಂಜೆ ರಂಗಪ್ಪ ತಂದೆ ಹನುಮಂತಪ್ಪ ಅವರ ಮನೆಯ ದೇವರ ಕಾರ್ಯಕ್ರಮದಲ್ಲಿ, ಮಾಂಸಹಾರಿ ಊಟ ಮಾಡಿದ ಸುಮಾರು 50 ಜನರು ಅಸ್ವಸ್ಥರಾದ ಘಟನೆ ನಡೆದಿದೆ.

ಮಗಳ ಮದುವೆ ನಂತರ ರಂಗಪ್ಪ ಮನೆಯಲ್ಲಿ ದೇವರ ಕಾರ್ಯ ನಡೆಸಿ ಸ್ಥಳೀಯ ಹಾಗೂ ಸುತ್ತಮುತ್ತಲಿನ ಗ್ರಾಮದ ನೆಂಟರಿಷ್ಟರನ್ನು ಊಟಕ್ಕೆ ಆಹ್ವಾನಿಸಿದ್ದರು. ಕಾರ್ಯಕ್ರಮದಲ್ಲಿ ಊಟ ಮಾಡಿದ ನಾಲ್ಕೈದು ಜನರಿಗೆ ಗುರುವಾರ ಬೆಳಗಿನಿಂದಲೇ ಭೇದಿ ಜ್ವರ, ಹೊಟ್ಟೆ ಮುರಿತ ನೋವು ಕಾಣಿಸಿಕೊಂಡಿದೆ. ಅಸ್ವಸ್ಥರು ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದುಕೊಂಡಿದ್ದಾರೆ. ನಂತರ ಶುಕ್ರವಾರ ಕಾರ್ಯಕ್ರಮದಲ್ಲಿ ಊಟಮಾಡಿದ 37 ಗ್ರಾಮಸ್ಥರಲ್ಲಿ ಅಸ್ವಸ್ಥೆ ಕಂಡುಬಂದಿದೆ. ಈ ಹಿನ್ನಲೆಯಲ್ಲಿ ಬಾಗೂರು ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ತಕ್ಷಣವೇ ತುರ್ತಾಗಿ ಹಳೇ ಕುಂದೂರಿನಲ್ಲಿ ತಾತ್ಕಾಲಿಕ ಚಿಕಿತ್ಸಾ ಘಟಕವನ್ನು ತೆರೆದು ಅಸ್ವಸ್ಥರಿಗೆ ಚಿಕಿತ್ಸೆ ನೀಡಲಾಗಿದೆ. 11 ಪ್ರಕರಣಗಲ್ಲಿ ಹೆಚ್ಚಿನ ಚಿಕಿತ್ಸೆಗೆ ಬಾಗೂರು ಆರೋಗ್ಯ ಕೇಂದ್ರಕ್ಕೆ ದಾಖಲಿಸಲಾಗಿದೆ. ಮಾರ್ಚ್ 6 ಶನಿವಾರದಂದು ಕೂಡ 2 ಅಸ್ವಸ್ಥ ಪ್ರಕರಣಗಳು ಬೆಳಕಿಗೆ ಬಂದಿವೆ. ಆದ್ದರಿಂದ ಹೊಸದುರ್ಗ ಸಂಚಾರಿ ಆರೋಗ್ಯ ಘಟಕವನ್ನು ಗ್ರಾಮದಲ್ಲಿ ಇರಿಸಿ ಚಿಕಿತ್ಸೆ ಮುಂದುವರಿಸಲಾಗಿದೆ.

ಪ್ರಕರಣದ ಹಿನ್ನಲೆಯಲ್ಲಿ ಗ್ರಾಮದ 6 ಕುಡಿಯುವ ನೀರಿನ ಮಾದರಿಗಳನ್ನು ಪರೀಕ್ಷೆಗಾಗಿ ಸಂಗ್ರಹಿಸಲಾಗಿದೆ. ದೇವತಾ ಕಾರ್ಯದಲ್ಲಿ ಭಾಗವಹಿಸದರಲ್ಲಿ ಮಾತ್ರ ಭೇದಿ, ಜ್ವರ, ಹೊಟ್ಟೆ ಮುರಿತ, ನೋವು ಕಂಡು ಬಂದಿದೆ. ವಾಂತಿ ಭೇದಿ ಪ್ರಕರಣಗಳ ವಿಷಯ ತಿಳಿದ ತಕ್ಷಣ ತಾಲ್ಲೂಕು ಆರೋಗ್ಯಾಧಿಕರಿಗಳ ಆರ್.ಆರ್.ಟಿ ತಂಡ, ಜಿಲ್ಲಾ ಸರ್ವೇಕ್ಷಣಾ ಕಛೇರಿಯ ಆರ್.ಆರ್.ಟಿ ತಂಡಗಳು ಗ್ರಾಮಕ್ಕೆ ಭೇಟಿ ನೀಡಿ ಚಿಕಿತ್ಸೆ ಮತ್ತು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿವೆ. ಜಿಲ್ಲಾ ಮತ್ತು ತಾಲ್ಲೂಕು ಆರೋಗ್ಯ ತಂಡಗಳು ಗ್ರಾಮದ ಪ್ರತಿ ಮನೆ ಮನೆ ಭೇಟಿ ನೀಡಿ ಶುದ್ಧ ಕುಡಿಯುವ ನೀರು, ಬೇಸಿಗೆ ತಾಪಮಾನ ರಕ್ಷಣೆ, ಶುದ್ಧ ಆಹಾರ ಸೇವಿಸುವ ಬಗ್ಗೆ ಸಾರ್ವಜನಿಕರಿಗೆ ಬಗ್ಗೆ ಸಾರ್ವಜನಿಕರಿಗೆ ಆರೋಗ್ಯ ಶಿಕ್ಷಣ ನೀಡಿ ಅರಿವು ಮೂಡಿಸಿದ್ದಾರೆ. ಬಾಗೂರು ಆರೋಗ್ಯಾಧಿಕಾರಿ ಡಾ.ಪರಶುರಾಮ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ವೀರೇಂದ್ರ ಪಾಟೀಲ್, ಜಿಲ್ಲಾ ಆರ್.ಆರ್.ಟಿ. ತಂಡದ ಆರೋಗ್ಯ ನಿರೀಕ್ಷಣಾಧಿಕಾರಿ ಎಮ್.ಹೆಚ್.ಮಂಜುನಾಥ, ವಿಶ್ವನಾಥ. ಆಶಾ ಕಾರ್ಯಕರ್ತೆಯರು ಸಂಚಾರಿ ಆರೋಗ್ಯ ತಪಾಸಣಾ ತಂಡ ಆರೋಗ್ಯ ಜಾಗೃತಿ ಕಾರ್ಯದಲ್ಲಿ ಪಾಲ್ಗೊಂಡಿದ್ದರು.

### ಲೋಕಸಭೆ ಚುನಾವಣೆ : ಮತದಾನ ಪ್ರಮಾಣ ಹೆಚ್ಚಿಸಲು ತಾಲ್ಲೂಕು ಸ್ವೀಪ್ ಸಮಿತಿಯಿಂದ ರಂಗೋಲಿ ಸ್ಪರ್ಧೆ



» ಚಳ್ಳಕೆರೆ

ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಏ.26ರಂದು ನಡೆಯುವ ಲೋಕಸಭಾ ಚುನಾವಣೆಯ ಮತದಾನ ಪ್ರಮಾಣವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಜಿಲ್ಲಾ ಸ್ವೀಪ್ ಸಮಿತಿ ಸಹಯೋಗದೊಂದಿಗೆ ತಾಲ್ಲೂಕು ಸ್ವೀಪ್ ಸಮಿತಿಯಿಂದ ವಿವಿಧ ಕಾರ್ಯಕ್ರಮ ಆಯೋಜಿಸಿದ್ದು, ಸಾರ್ವಜನಿಕರು ಸ್ವಯಂಸ್ಫೂರ್ತಿಯಿಂದ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಮೂಲಕ ಮತದಾನದ ಜಾಗೃತಿ ಅಭಿಯಾನಕ್ಕೆ ಹೆಚ್ಚು ಒತ್ತು ನೀಡುತ್ತಿದ್ದಾರೆಂದು ತಾಲ್ಲೂಕು ಸ್ವೀಫ್ ಸಮಿತಿ ಅಧ್ಯಕ್ಷ ಬಿ.ಎಸ್.ಲಕ್ಷ್ಮಣ್ ತಿಳಿಸಿದ್ದಾರೆ.

ಅವರು, ಶನಿವಾರ ನಗರಸಭೆ ಆವರಣ ಹಾಗೂ ಚಿತ್ರದುರ್ಗ ರಸ್ತೆಯ ಬದಿಯಲ್ಲಿ ಮತದಾನ ಜಾಗೃತಿ ಅಂಗವಾಗಿ ಹಮ್ಮಿಕೊಂಡಿದ್ದ ರಂಗೋಲಿ ಸ್ಪರ್ಧೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ಮಹಿಳೆಯರು ಸ್ವಯಂ ಸ್ಫೂರ್ತಿಯಿಂದ ಪಾಲ್ಗೊಂಡು ಮತದಾನ ಜಾಗೃತಿಯ ಬಗ್ಗೆ ವಿವಿಧ ರಂಗೋಲಿ ಮೂಲಕ ಗಮನಸೆಳೆದಿದ್ದಾರೆ. ಮತದಾನ ಪ್ರಮಾಣ ಹೆಚ್ಚಿಸುವ ನಿಟ್ಟಿನಲ್ಲಿ ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ ಎಲ್ಲರೂ ಇದಕ್ಕೆ ಕೈಜೋಡಿಸಬೇಕೆಂದರು. ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ಪೌರಾಯುಕ್ತ ಜೀವನ್‌ಕಟ್ಟಿಮನಿ, ಪರಿಸರ ಇಂಜಿನಿಯರ್ ನರೇಂದ್ರಬಾಬು, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಕೆ.ವಿನಯ್, ಸಹಾಯಕ ಇಂಜಿನಿಯರ್ ಲೋಕೇಶ್, ಹಿರಿಯ ಆರೋಗ್ಯ ನಿರೀಕ್ಷಕರಾದ ಗಣೇಶ್, ಗೀತಕುಮಾರಿ ಮುಂತಾದವರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಕಾಂಗ್ರೆಸ್ ತಮ್ಮ ತಪ್ಪು ಮುಚ್ಚಿಕೊಳ್ಳಲು ಕೇಂದ್ರದ ಮೇಲೆ ಆರೋಪ

» ಚಿತ್ರದುರ್ಗ

ಪ್ರತಿ ಲೋಕಸಭಾ ಕ್ಷೇತ್ರಕ್ಕೆ ಕೇಂದ್ರ ಸರ್ಕಾರ ನೀಡಿರುವಂತಹ ಯೋಜನೆಗಳ ಬಗ್ಗೆ ಶ್ವೇತಾ ಪತ್ರವನ್ನು ಬಿಡುಗಡೆ ಮಾಡಲಾಗಿದೆ. ಕಾಂಗ್ರೆಸ್ ಪಕ್ಷದವರು ತಮ್ಮ ತಪ್ಪುಗಳನ್ನು ಮುಚ್ಚಿ ಹಾಕುವ ಸಲುವಾಗಿ ಕೇಂದ್ರದ ಕಡೆಗೆ ಬೆರಳು ಮಾಡಿ ತೋರಿಸುತ್ತಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್ ನವೀನ್ ಆರೋಪಿಸಿದರು.



ಚಿತ್ರದುರ್ಗ ನಗರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಸಿದ್ದರಾಮಯ್ಯನವರು ಭದ್ರಾ ಮೇಲ್ದಂಡೆ ಯೋಜನೆಗೆ ಹಣ ಬಂದಿಲ್ಲ ಎಂದು ಆರೋಪ ಮಾಡುತ್ತಾರೆ. ಆದರೆ ಯೋಜನೆಗೆ ತಕ್ಕಂತೆ ಪ್ರಾಜೆಕ್ಟ್ ವರದಿಯನ್ನು ಇದುವರೆಗೂ ಕೇಂದ್ರ ಸರ್ಕಾರಕ್ಕೆ ಸಬ್ಮಿಟ್ ಮಾಡಿಲ್ಲ ಎಂದ ಅವರು, ನಾವು ನಮ್ಮ ರಿಪೋರ್ಟ್ ಕಾರ್ಡ್ ಇಟ್ಟುಕೊಂಡು ಮತದಾರರ ಮುಂದೆ ಹೋಗುತ್ತೇವೆ.. ನಾವು ದ್ವೇಷದ ರಾಜಕಾರಣ ಮಾಡುವುದಿಲ್ಲ. ಜಾತಿ ರಾಜಕಾರಣದ ವೈಷಮ್ಯವನ್ನು ವೇದಿಕೆಯ ಮೇಲೆ ಮಾಡುವುದನ್ನು ದಯವಿಟ್ಟು ನಿಲ್ಲಿಸಿ ಎಂದರು.

ಮಿಸ್ಟರ್ ಗೋವಿಂದ ಕಾರಜೋಳ್ ಗೋ ಬ್ಯಾಕ್ ಅಂತ ಹೇಳುವುದನ್ನು ಬಿಜೆಪಿ ಪಕ್ಷ ಖಂಡಿಸುತ್ತದೆ. ನೀವು ಮೈಸೂರಿಂದ ಬಾಗಲಕೋಟೆ ಜಿಲ್ಲೆಯ ಬಾದಾಮಿಗೆ ಹೋದಾಗ ಅವರು ಗೋ ಬ್ಯಾಕ್ ಅಂದಿದ್ದಾರೆ.. ಸಿದ್ದರಾಮಯ್ಯನವರು ಇಷ್ಟೊತ್ತಿಗೆರಾಜಕೀಯದಸಂಧ್ಯಾಕಾಲದಲ್ಲಿ ಇರುತ್ತಿದ್ದರು... ಗೋವಿಂದ ಕಾರಜೋಳ್ ರವರು ಮಾದಿಗ ಸಮುದಾಯದ ನಾಯಕ.. ಮಾದಿಗರಿಗೆ ಏನು ಬೇಕಾದರೂ ಅಂದರು ನಡೆಯುತ್ತದೆ ಅಂತ ಅಂದುಕೊಂಡಿದ್ದಾರೆ ಸಿದ್ದರಾಮಯ್ಯನವರು... ಮಾದಿಗರ ಬಗ್ಗೆ ಏನು ಬೇಕಾದರೂ ಮಾತನಾಡಿದರೆ ನಡೆಯುತ್ತೆ ಅಂದುಕೊಂಡಿದ್ದಾರೆ... ಒಬ್ಬ ಮಾಜಿ ಉಪ ಮುಖ್ಯಮಂತ್ರಿಗೆ ಅವಮಾನ ಮಾಡಿದ್ದಾರೆ ಇದನ್ನು ನಾವು ಖಂಡಿಸುತ್ತೇವೆ.

ದಲಿತರು ಅಂದರೆ ನಿಮಗೆ ಅಷ್ಟೊಂದು ಅಸಡ್ಡೆನಾ...? ಈ ಹಿಂದೆ ಪರಮೇಶ್ವರ ಅವರನ್ನು ನೀವೇ ಸೋಲಿಸಿದ್ದೀರಿ... ಇದೇನಾ ದಲಿತರ ಮೇಲಿನ ಪ್ರೀತಿ... ಸಿದ್ದರಾಮಯ್ಯನವರು ಈ ಮಾತನ್ನು ವಾಪಸ್ ಪಡೆಯಬೇಕು.. ಸಂವಿಧಾನ ಅಡಿಯಲ್ಲಿ ಯಾರು ಎಲ್ಲಿ ಬೇಕಾದರೂ ಸ್ಪರ್ಧಿಸಬಹುದು.. ಸಿದ್ದರಾಮಯ್ಯನವರೇ, ನೀವು ಬೇಕಾದರೆ ಇಲ್ಲಿಬೇಕಾದರೂ ಸ್ಪರ್ಧಿಸಬಹುದು ಆದರೆ ಬೇರೆಯವರು ಸ್ಪರ್ಧಿಸಬಾರದಾ..?ಸಿದ್ದರಾಮಯ್ಯನವರೇ ಚಿತ್ರದುರ್ಗ ಜಿಲ್ಲೆಯ ದಲಿತರು ಕಾಂಗ್ರೆಸ್ ವಿರುದ್ಧ ಮತ ಹಾಕುವುದರ ಮೂಲಕ ನಿಮಗೆ ತಕ್ಕ ಉತ್ತರ ನೀಡಲಿದ್ದಾರೆ. ಗೋವಿಂದ ಕಾರಜೋಳ್ ರವರು 500 ಕಿ.ಮೀ ದೂರ ಬಂದಿದ್ದಾರೆ ಆದರೆ ನೀವು 800 ಕಿ.ಮೀ ದೂರ ಹೋಗಿದ್ದಿರಲ್ವಾ...? ಎಂದು ಪ್ರಶ್ನಿಸಿದರು.

ನೀವೇನು 05 ವರ್ಷದಲ್ಲಿ ಭದ್ರಾ ಮೇಲ್ದಂಡೆಯ ಯೋಜನೆಯ ಕಾಮಗಾರಿಯನ್ನು ಮುಕ್ತಾಯ ಮಾಡುತ್ತೇವೆ ಅಂತ ಹೇಳ್ತಿರಲ್ಲ ಇದ್ದೀರಿ.? ಈ ಹಿಂದೆ ನಿಮ್ಮ ಅವಧಿಯಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ ಎಷ್ಟು ಹಣ ನೀಡಿದ್ದೀರಿ...? ಜಿಲ್ಲೆಯಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜು ಏಕೆ ಮಾಡಲಿಲ್ಲ. ಎಂದು ಪ್ರಶ್ನಿಸಿ, ಕೇಂದ್ರ ಸರ್ಕಾರ ಜಿಲ್ಲೆಯ ಜನತೆಗೆ ವಿವಿಧ ಯೋಜನೆಯಡಿ ನೆರವನ್ನು ಮಾಡಿದೆ. ಇದರ ಉಪಯೋಗವನ್ನು ಕೇಂದ್ರ ಸರ್ಕಾರದಿಂದ ನೇರವಾಗಿ ಫಲಾನುಭವಿಗಳಿಗೆ ನೀಡಲಾಗಿದೆ.

ಪ್ರಧಾನಿ ಮೋದಿರವರು ಯಾರು ಹಸಿವಿನಿಂದ ನರಳಬಾರದೆಂದು ಜಿಲ್ಲೆಯಲ್ಲಿ ಹದಿನಾರು ಲಕ್ಷದ 37685 ಜನರಿಗೆ ಪಡಿತರ ಧಾನ್ಯ ನೀಡಿದ್ದಾರೆ. ಆರು ಲಕ್ಷದ ಐವತ್ತು ಸಾವಿರದ 257 ಜನರಿಗೆ ಐದು ಲಕ್ಷದವರೆಗೆ ಅತಿ ದೊಡ್ಡ ವಿಮೆ ಯೋಜನೆ ಸಿಕ್ಕಿದೆ. ಜಲಜೀವನ್ ಮಿಷನ್ ಯೋಜನೆಯಡಿ ಜಿಲ್ಲೆಯಲ್ಲಿ ಒಂದು ಲಕ್ಷ ತೊಂಬತ್ತು ಸಾವಿರ ಮನೆಗಳಿಗೆ ನೀರಿನ ಸಂಪರ್ಕ ಕಲ್ಪಿಸಲಾಗಿದೆ. ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ 9 ಸಾವಿರದ 908 ನೂತನ ಮನೆಗಳನ್ನು ನಿರ್ಮಾಣ ಮಾಡಲಾಗಿದೆ. ಮೂರು ಲಕ್ಷದ 24 ಸಾವಿರದ ಐದು ನೂರು ಜನರು ಈ ಶ್ರಮ್ ಕಾರ್ಡ್ ಪಡೆದುಕೊಂಡಿದ್ದಾರೆ. ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಜಿಲ್ಲೆಯಲ್ಲಿ 27 ಲಕ್ಷದ ಐದು ಸಾವಿರದ 945 ಶೌಚಾಲಯಗಳನ್ನು ನಿರ್ಮಾಣ ಮಾಡಲಾಗಿದೆ ಎಂದರು.

ಕಿಸಾನ್ ಸಮ್ಮಾನ್ ಯೋಜನೆಯಡಿ ಕೇಂದ್ರದಿಂದ ಆರು ಸಾವಿರ ರೂ. ಹಾಗೂ ರಾಜ್ಯದಿಂದ ನಾಲ್ಕು ಸಾವಿರ ರೂ. 3 ಲಕ್ಷ 37 ಸಾವಿರದ 527 ರೈತರ ಖಾತೆಗಳಿಗೆ ಹಣ ಜಮಾ ಆಗುತ್ತಿದೆ. ಹದಿನೆಂಟು ಸಾವಿರದ 120 ರೈತರ ಹೊಲಗಳಿಗೆ ಸಾಯಿ ಹೆಲ್ತ್ ಕಾರ್ಡ್ ಸಿಕ್ಕಿದೆ. ಜನ್‌ಧನ್ ಯೋಜನೆ ಶೇ. ನೂರರಷ್ಟು ಅನುಷ್ಠಾನಗೊಂಡಿದೆ. ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ 2014 ರಿಂದ ಇಲ್ಲಿಯವರೆಗೆ ಒಂದು ಸಾವಿರದ 81 ಕಿ.ಮಿ. ರಸ್ತೆಯಾಗಿದೆ. ವೃದ್ದಾಪ್ಯ ವೇತನ ಯೋಜನೆಯಡಿ ಮೂರು ಲಕ್ಷ ಎಂಟು ಸಾವಿರದ 338 ಜನರಿಗೆ ಪಿಂಚಣಿ ಸಿಕ್ಕಿದೆ. ಕೌಶಲ್ಯಾಭಿವೃದ್ಧಿ ಯೋಜನೆಯಡಿ 31477 ಯುವಕರಿಗೆ ವಿದ್ಯಾರ್ಥಿ ವೇತನ ನೀಡಲಾಗಿದೆ. ಜಿಲ್ಲೆಯಲ್ಲಿ 20 ಜನೌಷಧಿ ಕೇಂದ್ರಗಳು ಆರಂಭಗೊಂಡಿವೆ. 16722 ಮಹಿಳೆಯರಿಗೆ ವಿಶೇಷ ತರಬೇತಿ ನೀಡಲಾಗಿದೆ. ಸ್ವನಿಧಿ ಯೋಜನೆಯಡಿ 6777 ಬೀದಿ ಬದಿ ವ್ಯಾಪಾರಿಗಳಿಗೆ ತಲಾ ಹತ್ತು ಸಾವಿರ ರೂ.ಗಳನ್ನು ನೀಡಲಾಗಿದೆ. ಪ್ರಧಾನ ಮಂತ್ರಿ ಸೌಭಾಗ್ಯ ಯೋಜನೆಯಡಿ 4 ಲಕ್ಷ 36 ಸಾವಿರದ 949 ಫಲಾನುಭವಿಗಳಿಗೆ ಎಲ್.ಇ.ಡಿ. ಬಲ್ಬ್‌ಗಳನ್ನು ವಿತರಿಸಲಾಗಿದೆ. ಉಜ್ವಲ ಯೋಜನೆಯಡಿ 2 ಲಕ್ಷ ಐದು ಸಾವಿರದ 331 ಮನೆಗಳಿಗೆ ಅಡುಗೆ ಅನಿಲ ಸಂಪರ್ಕ ಕಲ್ಪಿಸಲಾಗಿದೆ.

ಶ್ರಮಯೋಗಿ ಮಾನಧನ್ ಅಡಿ 7238 ಕಾರ್ಮಿಕರು ಸೌಲಭ್ಯಗಳನ್ನು ಪಡೆದುಕೊಂಡಿದ್ದಾರೆಂದು ತಿಳಿಸಿ ಮುದ್ರಾಂಕ ಯೋಜನೆಯಡಿ ಎರಡು ಲಕ್ಷಕ್ಕೂ ಹೆಚ್ಚು ಮಂದಿಗೆ ಸಾಲ ಸೌಲಭ್ಯಗಳನ್ನು ನೀಡಲಾಗಿದೆ. ಲಕ್ಷಾಂತರ ರೈತರ ಖಾತೆಗಳಿಗೆ ಪ್ರಧಾನ ಮಂತ್ರಿ ಫಸಲ್ ಭೀಮ ಯೋಜನೆಯಡಿ ಹಣ ವರ್ಗಾವಣೆಯಾಗಿದೆ. ಹೈವೆ ನಿರ್ಮಾಣಕ್ಕೆ ಆರು ಸಾವಿರ ಕೋಟಿ ರೂ.ಗಳನ್ನು ಖರ್ಚು ಮಾಡಲಾಗಿದೆ ಎಂದರು.

ಬಿಜೆಪಿ. ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಜಿ.ಟಿ.ಸುರೇಶ್‌ಸಿದ್ದಾಪುರ, ಸಂಪತ್, ನಗರಾಧ್ಯಕ್ಷ ನವೀನ್ ಚಾಲುಕ್ಯ, ವಕ್ತಾರ ನಾಗರಾಜ್ ಬೇದ್ರೆ, ಮಾಧ್ಯಮ ವಕ್ತಾರ ದಗ್ಗೆಶಿವಪ್ರಕಾಶ್, ತಿಪ್ಪೇಸ್ವಾಮಿ ಛಲವಾದಿ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಹೊಸದುರ್ಗದಲ್ಲಿ ಮಾತೆ ಶ್ರೀ ಹಿಂಗುಲಾಂಬಿಕೆ ದೇವಿ ಜಯಂತಿ



» **ಹೊಸದುರ್ಗ**

ಭಾವಸಾರ ಸಮುದಾಯದ ಅಭಿವೃದ್ಧಿಗೆ ಒಂದು ಗುರುಪೀಠ ಸ್ಥಾಪನೆಯ ಅಗತ್ಯವಿದೆ. ಸಮುದಾಯಕ್ಕೆ ಗುರುಗಳು ದೊರೆತರೆ ಸಂಘಟನೆಗೆ ಅನುಕೂಲವಾಗುತ್ತದೆ. ಕುಲದೇವತೆ ಶ್ರೀ ಹಿಂಗುಲಾಂಬಿಕೆ ದೇವಿ ಶಕ್ತಿಪೀಠವು ಪಾಕಿಸ್ಥಾನದಲ್ಲಿರುವುದರಿಂದ ದರ್ಶನ ಪಡೆಯಲು ಸಾಧ್ಯವಾಗುತ್ತಿಲ್ಲ. ಕರ್ನಾಟಕದಲ್ಲಿಯೇ ಶ್ರೀ ಹಿಂಗುಲಾಂಬಿಕೆ ದೇವಿ ಶಕ್ತಿ ಪೀಠವನ್ನು ಸ್ಥಾಪಿಸಿದರೆ ಸಮುಧಾಯದ ಜನರ ಧಾರ್ವಿಕ ಅಚರಣೆಗಳಿಗೆ ಅನುಕೂಲವಾಗುತ್ತದೆ ಎಂದು ಎಬಿಬಿಕೆ ಮಹಾಸಭಾದ ರಾಷ್ಟ್ರೀಯ ಉಪಾಧ್ಯಕ್ಷ ಉಮೇಶ್ ಗುಜ್ಜಾರ್ ತಿಳಿಸಿದರು.ಭಾವಸಾರ ಕ್ಷತ್ರಿಯ ಮಹಸಭಾ ಹಾಗೂ ತುಳಜಾಭವಾನಿ ಸೇವಾ ಟೆಸ್ಟ್ ವತಿಯಿಂದ ಪಟ್ಟಣದ ಶ್ರೀ ಪಾಂಡುರಂಗ ವಿಠಲ ಸಮುದಾಯ ಭವನದಲ್ಲಿ ಭಾನುವಾರ ಆಯೋಜಿಸಲಾಗಿದ್ದ ಶ್ರೀ ಮಾತಾ ಹಿಂಗುಲಾಂಬಿಕಾ ದೇವಿಯ ಜಯಂತೋತ್ಸವ ಕಾರ್ಯಕ್ರವನ್ನ ಉದ್ಘಾಟಿಸಿ ಮಾತನಾಡಿದರು.ಭಾವಸಾರ ಕ್ಷತ್ರಿಯ ಸಮಾಜ ಬಂಧುಗಳು ಆರ್ಥಿಕವಾಗಿ ಹಿಂದುಳಿದಿರುವ ಸಮಾಜದ ಜನರು.ಅಲ್ಲಿಗೆ ತೆರಳಿ ಕುಲ ದೇವತೆಯ ದರ್ಶನ ಮಾಡಲು ಸಾಧ್ಯವಾಗುತ್ತಿಲ್ಲ ಈ ಮೂಲಕ ಧಾರ್ಮಿಕ ಸಂಕಷ್ಟಕ್ಕೆ ಒಳಗಾಗಿದ್ದಾರೆ ಎಂಬ ವಿಷಾದವನ್ನ ವ್ಯಕ್ತಪಡಿಸಿದರು.ಪಾಕಿಸ್ತಾನದ ಹಿಂಗ್ಲಾಜ್‌ನಲ್ಲಿರುವ ಶ್ರೀ ಹಿಂಗುಲಾಂಬಿಕೆ ದೇವಿ ಶಕ್ತಿಯ ಪೀಠವನ್ನು ಕರ್ನಾಟದಲ್ಲಿ ಸ್ಥಾಪಿಸಲು 100 ಎಕರೆ ಭೂಮಿ ಬೇಕಾಗುತ್ತದೆ ಈ ವಿಚಾರವಾಗಿ ಮಹಾಸಭಾದ ಮೂಲಕ ಸರ್ಕಾರದ ಗಮನಕ್ಕೆ ತರಲಾಗಿದ್ದು ಶ್ರೀ ಹಿಂಗುಲಾಂಬಿಕೆ ದೇವಿ ಶಕ್ತಿಯ ಪೀಠವನ್ನು ಕರ್ನಾಟದಲ್ಲಿ ಸ್ಥಾಪಿಸಲು ಪ್ರಯತ್ನಗಳು ನಡೆಯುತ್ತಿವೆ ಎಂದರು. ಈ ಸಂಧರ್ಬದಲ್ಲಿ ಸಾಧನಸುರೇಶ್, ಮಂಗಳಉಮೇಶ್, ಮೀನಾಕ್ಷಿ ಹರೀಶ್, ನಂದಿನಿ ಗುಜ್ಜರ್. ಐಶ್ವರ್ಯ ಗುಜ್ಜರ್‌ಸಾವಿತ್ರಿ ಗುಜ್ಜರ್. ರಾಜಾರಾಮ್, ಪ್ರಶಾಂತ್ ಗುಜ್ಜರ್‌ಬಾಬುರಾವ್,ವಾಸುದೇವ್‌ರಾವ್ ಗುಜ್ಜರ್, ಸುರೇಶ್‌ಮಹಳತ್ಕರ್,ಗಣೇಶ್ ಮಹಳತ್ಕರ್, ರಾಮಚಂದ್ರರಾವ್‌ಪಟಕೆ, ಸಂತೋಷ, ಮುಕುಂದ್ ರಾವ್, ಸುನಿಲ್, ರಾಜುಹೋವಲೆ, ಮೋಹನ್ ಗುಜ್ಜರ್ ಹಾಗೂ ಸಮಾಜದ ಬಂಧುಗಳು ಭಾಗವಹಿಸಿದ್ದರು.ಕಾರ್ಯಕ್ರಮಕ್ಕೂ ಮುನ್ನ ಕುಲದೇವತೆ ಶ್ರೀ ಹಿಂಗುಲಾಂಬಿಕೆ ದೇವಿಯವರ ಭಾವ ಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಲಾಯಿತು. ಕಾರ್ಯಕ್ರಮ ಅಂಗವಾಗಿ ಶ್ರೀ ಹಿಂಗುಲಾಂಬಿಕೆ ದೇವಿ ಹಾಗೂ ಶ್ರೀ ವಿಠಲ ರುಕುಮಾಯಿ ಪಾಂಡುರಂಗ ದೇವರಿಗೆ ವಿಶೇಷ ಪೂಜೆ ನೆರವರಿಸಲಾಯಿತು.ಕಾರ್ಯಕ್ರಮದ ನಂತರ ಅನ್ನ ಸಂತರ್ಪಣೆ ನಡೆಯಿತು.

### ಕುಡಿಯುವ ನೀರಿಗೆ ಸಂಚಕಾರ ತಂದ ಗ್ರಾಪಂ ಸದಸ್ಯರ ವಿರುದ್ದ ಕ್ರಮಕ್ಕೆ ಒತ್ತಾಯಿಸಿ ಮನವಿ



» **ಚಳ್ಳಕೆರೆ**

ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿಗೆ ತೊಂದರೆಯಾಗದಂತೆ ಜಾಗ್ರತೆ ವಹಿಸಿ, ಅವಶ್ಯವಿದ್ದಲ್ಲಿ ಹೆಚ್ಚುವರಿಯಾಗಿ ಸರ್ಕಾರದಿಂದಲೇ ಬೋರ್‌ಕೊರೆಸಿ ಅಥವಾ ಖಾಸಗಿ ವ್ಯಕ್ತಿಗಳಿಂದ ನೀರು ಪಡೆದು ಜನರಿಗೆ ಕುಡಿಯುವ ನೀರು ನೀಡಲು ಸರ್ಕಾರ ನಿರ್ದೇಶನ ನೀಡಿದ್ದರೂ ಸಹ ತಾಲ್ಲೂಕಿನ ಮನ್ನೇಕೋಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆರೆಯಾಗಳಹಳ್ಳಿಯ ಎ.ಕೆ.ಕಾಲೋನಿಯ ನೂರಾರು ಬಡ ಕಟುಂಬಗಳಿಗೆ ನೀರು ದೊರೆಯದಂತೆ ಚುನಾಯಿತ ಗ್ರಾಮ ಪಂಚಾಯಿತಿ ಸದಸ್ಯರೇ ಅಡ್ಡಿಪಡಿಸಿದ ಘಟನೆ ನಡೆದಿದೆ. ಕೆರೆಯಾಗಳಹಳ್ಳಿ ಗ್ರಾಮದ ಎ.ಕೆ.ಕಾಲೋನಿ ನಿವಾಸಿಗಳು ಕಳೆದ ಹಲವಾರು ವರ್ಷಗಳಿಂದ ಅಲ್ಲಿನ ಕೆರೆಯಂಗಳದಲ್ಲಿ ಸರ್ಕಾರ ಹಾಕಿಸಿದ ಬೋರ್‌ನಿಂದ ನೀರು ಪಡೆಯುತ್ತಿದ್ದು, ಜನರಿಗೆ ಜಾನುವಾರುಗಳಿಗೆ ಈ ನೀರು ಸಮಪರ್ಕವಾಗಿ ವಿತರಣೆಯಾಗುತ್ತಿದ್ದು, ಕುಡಿಯುವ ನೀರಿನ ತೊಂದರೆಯಾಗದಂತೆ ಜನರು ಸಂತೃಪ್ತಿಯಾಗಿದ್ದರು. ಆದರೆ, ಅದೇ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೋಡಿಹಳ್ಳಿ ಗ್ರಾಮಕ್ಕೆ ಕುಡಿಯುವ ನೀರಿನ ಸಮಸ್ಯೆ ಎದುರಾದಾಗ ಪಂಚಾಯಿತಿಸದಸ್ಯರಾಜಣ್ಣ,ರೇವಣಎಂಬುವವರು ಕೆರೆಯಂಗಳದಲ್ಲಿದ್ದ ಬೋರ್‌ನಿಂದ ಗ್ರಾಮಕ್ಕೆ ನೀರನ್ನು ತೆಗೆದುಕೊಂಡುಹೋಗಲು ಯಾರಿಗೂ ತಿಳಿಸದೆ ರಾತ್ರೋರಾತ್ರಿ ಪೈಪ್‌ಲೈನ್ ಮಾಡಿದ್ದು, ಈ ಬಗ್ಗೆ ಆಕ್ರೋಶಗೊಂಡ ಎ.ಕೆ.ಕಾಲೋನಿಯ ಜನರು ತಮಗೆ ಕುಡಿಯುವ ನೀರಿಗೆ ಸಂಚಕಾರ ತರುತ್ತಿರುವ ಗ್ರಾಮ ಪಂಚಾಯಿತಿ ಸದಸ್ಯರ ವರ್ತನೆ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಹಾಗೂ ತಹಶೀಲ್ದಾರ್‌ಗೆ ಮನವಿ ನೀಡಿದರು.

# ಕೀ ಓಟರ್ಸ್ ಸಭೆ ನಡೆಸಿದ ಕಾರಜೋಳ

» **ಚಿತ್ರದುರ್ಗ**

ಚಿತ್ರದುರ್ಗ ಲೋಕಸಭಾ ಕ್ಷೇತ್ರದಿಂದ ಬಿಜೆಪಿ. ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಗೋವಿಂದ ಕಾರಜೋಳರವರು ನಗರದಲ್ಲಿ ವಿವಿಧ ಸಮುದಾಯದ ಪ್ರಬುದ್ದರ ಮತ್ತು ಕೀ ಓಟರ್ಸ್ ಸಭೆ ನಡೆಸಿ ಮತಯಾಚಿಸಿದರು.

ಒಂದೊಂದು ಬೂತ್‌ನಲ್ಲಿ ಈ ಬಾರಿಯ ಚುನಾವಣೆಯಲ್ಲಿ ಮುನ್ನೂರಕ್ಕೂ ಹೆಚ್ಚು ಮತಗಳು ಪಕ್ಷಕ್ಕೆ ಸಿಗುವಂತೆ ನೋಡಿಕೊಳ್ಳುವುದು ನಿಮ್ಮ ಜವಾಬ್ದಾರಿ. ಮೂರನೆ ಬಾರಿಗೆ ನರೇಂದ್ರಮೋದಿರವರು ಗೆದ್ದು ದೇಶದ ಪ್ರಧಾನಿಯಾದಾಗ ಮಾತ್ರ ಭಾರತ ವಿಶ್ವಗುರುವಾಗಲು ಸಾಧ್ಯ. ಈ ನಿಟ್ಟಿನಲ್ಲಿ ಮೋದಿರವರ ಜನಪರ ಯೋಜನೆಗಳನ್ನು ಪ್ರತಿ ಮನೆ ಮನೆಗೆ ಮುಟ್ಟಿಸಿ ಪಕ್ಷದ ಗೆಲುವಿಗೆ ಶ್ರಮಿಸಬೇಕೆಂದು ವಿನಂತಿಸಿದರು.



ಬೂತ್ ಮಟ್ಟದ ಬೈಠಕ್‌ಗಳಿಗೆ ಹೆಚ್ಚಿನ ಮಹತ್ವವಿರುವುದರಿಂದ ಸರಿಯಾಗಿ ನಡೆಯುವಂತೆ ನೋಡಿಕೊಳ್ಳುವುದು ನಿಮ್ಮ ಜವಾಬ್ದಾರಿ. ಹಿರಿಯ ನಾಗರೀಕರ ಮನಸ್ಸನ್ನು ಗೆಲ್ಲುವುದು ತುಂಬಾ ಮುಖ್ಯ. ಕುಟುಂಬದ ಎಲ್ಲಾ ಮತದಾರರು ಮತದಾನ ಮಾಡುವಂತೆ ಜಾಗೃತಿ ವಹಿಸಿ ಬೂತ್ ಗೆದ್ದರೆ ಚುನಾವಣೆ ಗೆದ್ದಂತೆ. ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗುವಂತೆ ತಿಳಿಸಿದರು.ಸಮಾಜ ಕಲ್ಯಾಣ ಸಚಿವನಾಗಿದ್ದಾಗ ಏನು ಅಭಿವೃದ್ದಿ ಕೆಲಸಗಳನ್ನು ಮಾಡಿದ್ದೆನೋ ಅದನ್ನು ಚಿತ್ರದುರ್ಗ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸಿ ಮಧ್ಯಕರ್ನಾಟಕದ ಬಯಲುಸೀಮೆಯನ್ನು ಅಭಿವೃದ್ದಿಗೊಳಿಸುವುದಾಗಿ ವಾಗ್ದಾನ ಮಾಡಿದರು.ಇದೇ ತಿಂಗಳ 26 ರಂದು ನಡೆಯುವ ಚುನಾವಣೆಯಲ್ಲಿ ಯಾರು ಎಲ್ಲಿಯೇಇರಲಿಮತದಾನಮಾಡುವುದನ್ನು ಮಾತ್ರ ಮರೆಯಬಾರದು. ಅದರಂತೆ ನಿಮ್ಮ ಮನೆಯ ಅಕ್ಕಪಕ್ಕದಲ್ಲಿರುವವರು ಕಡ್ಡಾಯವಾಗಿ ಮತದಾನ ಮಾಡುವಂತೆ ಮನವೊಲಿಸಬೇಕೆಂದು ಮನವಿ ಮಾಡಿದರು.

ಪಟೇಲ್, ಗುಜ್ಜರ್, ಜೈನ್, ವಿಷ್ಣು, ವಿಶ್ವಕರ್ಮ, ಮರಾಠ, ಗಂಗಾ ಮತಸ್ಥ, ಆರ್ಯವೈಶ್ಯ ಸಮಾಜದ ಪ್ರಮುಖರನ್ನು ಭೇಟಿ ಮಾಡಿ ಮತಯಾಚಿಸಿದ ಗೋವಿಂದ ಕಾರಜೋಳರವರು ನಮ್ಮ ಪಕ್ಷ ಸಣ್ಣಸಣ್ಣ ಜಾತಿಗಳನ್ನು ಗುರುತಿಸಿ ಒಂದಲ್ಲ ಒಂದು ರೀತಿಯಲ್ಲಿ ಅಧಿಕಾರ ನೀಡುತ್ತಿದೆ. ಇದೆ ತಿಂಗಳ 26 ರಂದು ನಡೆಯುವ ಚುನಾವಣೆಯಲ್ಲಿ ಅತಿ ಹೆಚ್ಚಿನ ಮತಗಳನ್ನು ನೀಡಿ ಗೆಲ್ಲಿಸುವುದರ ಮೂಲಕ ದೇಶದಲ್ಲಿ ಮತ್ತೊಮ್ಮೆ ನರೇಂದ್ರಮೋದಿರವರನ್ನು ಪ್ರಧಾನಿಯನ್ನಾಗಿ ಮಾಡುವಂತೆ ವಿನಂತಿಸಿದರು.

ಬಿಜೆಪಿ. ನಗರಾಧ್ಯಕ್ಷ ನವೀನ್ ಚಾಲುಕ್ಯ, ವಕ್ತಾರ ನಾಗರಾಜ್‌ಬೇದ್ರೆ, ಮಾಧ್ಯಮ ವಕ್ತಾರ ದಗ್ಗೆಶಿವಪ್ರಕಾಶ್, ಶಿವಣ್ಣಾಚಾರ್, ಶ್ರೇಣಿಕ್ ಈ ಸಂದರ್ಭದಲ್ಲಿದ್ದರು.

## ನುಂಕೇಮಲೆ ಸಿದ್ದೇಶ್ವರನ ನೆಲದಲ್ಲಿ ಕೈ ಮತ ಬೇಟೆ

» **ಮೊಳಕಾಲ್ಮುರು**

ಕಾಂಗ್ರೆಸ್ ಅಭ್ಯರ್ಥಿ ಚಂದ್ರಪ್ಪ ಅವರನ್ನು ಗೆಲ್ಲಿಸಿಕೊಳ್ಳುವ ಮೂಲಕ ಜಿಲ್ಲೆಯಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಕೇಂದ್ರದಲ್ಲಿ ಧ್ವನಿ ಎತ್ತಲು ಬಲ ತುಂಬಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕರ್ತರಿಗೆ ಕರೆ ನೀಡಿದರು.

ರಾಂಪುರದಲ್ಲಿ ಶನಿವಾರದಂದು ಕಾಂಗ್ರೆಸ್ ಕಾರ್ಯಕರ್ತರ ಸಭೆ ನಡೆಯಿತು ಸಭೆ ಉದ್ಘಾಟಿಸಿ ಮಾತನಾಡಿದ ಸಚಿವ ಸುಧಾಕರ್,ಸ್ಥಳೀಯವಾಗಿ ಜನರಿಗೆ ಸ್ಪಂದಿಸುವ ಅಭ್ಯರ್ಥಿಗಳನ್ನು ಆಯ್ಕೆ ಮಾಡಬೇಕಿದೆ. ದೂರದ ಜಿಲ್ಲೆಯಿಂದ ಬಂದಿರುವ ಅಭ್ಯರ್ಥಿಗೆ ಮಣೆ ಹಾಕಿ ಮತ ವ್ಯರ್ಥ ಮಾಡಿಕೊಳ್ಳಬೇಡಿ. ಕಾಂಗ್ರೆಸ್ ಪಕ್ಷ 5 ಗ್ಯಾರಂಟಿ ಯೋಜನೆಗಳನ್ನು ನೀಡಿದ್ದ ಭರವಸೆಯಂತೆ ಯಥಾವತ್ತು ಜಾರಿಗೊಳಿಸುವ ಮೂಲಕ ನುಡಿದಂತೆ ನಡೆದಿದೆ. ಈ ಚುನಾವಣೆಯಲ್ಲಿ ಮತ್ತೆ ಕಾಂಗ್ರೆಸ್ ಗೆ ಮತ ಹಾಕುವ ಮೂಲಕ ಜನಪರ ಸರ್ಕಾರವನ್ನು ಕೇಂದ್ರದಲ್ಲಿ ಪುನರ್ ಪ್ರತಿಸ್ಥಾಪಿಸಬೇಕಿದೆ ಎಂದು ಹೇಳಿದರು.

ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ನಂತರ ರಾಜ್ಯಕ್ಕೆ ಬರಬೇಕಿರುವ ತೆರಿಗೆ ಪಾಲಿನಲ್ಲಿ ತೀವ್ರ ಅನ್ಯಾಯವಾಗುತ್ತಿದೆ. ನಮ್ಮ ರಾಜ್ಯದ ಜನರು ಪಾವತಿಸುವ ರೂ 100 ತೆರಿಗೆ ಹಣದಲ್ಲಿ ನಮಗೆ ಸರಾಸರಿ ರೂ 13 ಮಾತ್ರ ವಾಪಾಸ್ಸಾಗುತ್ತಿದೆ.

ಇದನ್ನು ಈಚೆಗೆ ರಾಜ್ಯ ಕಾಂಗ್ರೆಸ್ ದೆಹಲಿಯಲ್ಲಿ ಪ್ರತಿಭಟನೆ ಮೂಲಕ ಪ್ರಶ್ನಿಸಿದೆ. ಇಂತಹ ಅನ್ಯಾಯಕ್ಕೆ ಈ ಚುನಾವಣೆಯಲ್ಲಿ ಜನರು ತಕ್ಕ ಪಾಠ ಕಲಿಸಿ ಸಿದ್ದರಾಮಯ್ಯ ಹಾಗೂ ರಾಜ್ಯ ಕಾಂಗ್ರೆಸ್‌ಸರ್ಕಾರದ ಕೈ ಬಲಪಡಿಸಬೇಕಿದೆ ಎಂದರು.

ಮಾಜಿಸಚಿವಎಚ್.ಆಂಜನೇಯಮಾತನಾಡಿ, ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ ನೀಡಿದ್ದ 5 ಗ್ಯಾರೆಂಟಿ ಯೋಜನೆಗಳನ್ನು ಜಾರಿ



ಮಾಡಲಾಗಿದೆ. ಈಗ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ 25 ಗ್ಯಾರೆಂಟಿ

ಯೋಜನೆಗಳನ್ನುಜಾರಿ ಭರವಸೆ ನೀಡಲಾಗಿದೆ. ಎಲ್ಲಾ ವರ್ಗಗಳ ಜನರ ಹಿತಕಾಯುವ ಪಕ್ಷವಾಗಿ ಕಾಂಗ್ರೆಸ್ ಹೊರಹೊಮ್ಮಿದ್ದು ಅಧಿಕಾರ ನೀಡುವ ಮೂಲಕ ಅಭಿವೃದ್ಧಿಗೆ ಸಹಕಾರ ನೀಡಬೇಕು ಎಂದು ಹೇದರು.

ಅಭ್ಯರ್ಥಿ ಬಿ.ಎನ್. ಚಂದ್ರಪ್ಪ ಮಾತನಾಡಿ, ಜಿಲ್ಲೆಯ 6 ಶಾಸಕ ಸ್ಥಾನಗಳ ಪೈಕಿ 5 ರಲ್ಲಿ ಕಾಂಗ್ರೆಸ್ ಶಾಸಕರಿದ್ದು, ಇನ್ನೂ 4 ವರ್ಷ ಅವಧಿಯನ್ನು ಹೊಂದಿದ್ದಾರೆ. ಈ ಬಾರಿ ನನ್ನನ್ನು ಆಯ್ಕೆ ಮಾಡಿದಲ್ಲಿ ಶಾಸಕರ ಜತೆಗೂಡಿ ಅಭಿವೃದ್ಧಿಗೆ

ಶ್ರಮಿಸಲಾವುದು. ಭದ್ರಾಮೇಲ್ದಂಡೆ ಯೋಜನೆ, ಶಿಕ್ಷಣ ಕಾರ್ಯಕ್ರಮಗಳು, ಕುಡಿಯುವ ನೀರಿನ ಯೋಜನೆಗಳಿಗೆ ಹೆಚ್ಚಿನ ಒತ್ತು ನೀಡಿ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಶ್ರಮಿಸಲಾಗುವುದು ಎಂದು ಹೇಳಿದರು.ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಮಾತನಾಡಿ ಕಾಂಗ್ರೆಸ್ ಗ್ಯಾರೆಂಟಿ ಯೋಜನೆಗಳು ಬಡವರ ಬದುಕನ್ನು ಬದಲಾಯಿಸಿದೆ.ಗ್ಯಾರೆಂಟಿ ಯೋಜನೆಯಿಂದ ನೆಮ್ಮದಿ ಬದುಕು ನಡೆಸಲಿ ಸಹಕಾರಿಯಾಗಿದ್ದು ಕಳೆದ ಲೋಕಸಭೆಯಲ್ಲಿ ಗೆದ್ದ ಸಂಸದರು ಜನರ ನಿರೀಕ್ಷೆಯಂತೆ ಕೆಲಸ ಮಾಡಲಿಲ್ಲ. ಆದ್ದರಿಂದ ಈ ಬಾರಿ ಕಾಂಗ್ರೆಸ್ ಅಭ್ಯರ್ಥಿ ಆಶೀರ್ವಾದ ಮಾಡುವ ಮೂಲಕಜಿಲ್ಲೆಯ ಅಭಿವೃದ್ಧಿ ಕಡೆ ಹೆಜ್ಜೆ ಹಾಕಲು ಪ್ರತಿಯೊಬ್ಬರು ಶ್ರಮಿಸಬೇಕು ಎಂದು ಕಾರ್ಯಕರ್ತರಿಗೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಶಾಸಕರಾದ ಎನ್.ವೈ. ಗೋಪಾಲಕೃಷ್ಣ , ಕೆ.ಸಿ. ವೀರೇಂದ್ರ, ರಾಜ್ಯ ದ್ರಾಕ್ಷಾರಸ ಹಾಗೂ ವೈನ್ ಬೋರ್ಡ್ ಅಧ್ಯಕ್ಷ ಬಿ. ಯೋಗೇಶ್ ಬಾಬು, ಕಾರ್ಮಿಕ ಕಲ್ಯಾಣ ಮಂಡಳಿ ಉಪಾಧ್ಯಕ್ಷ ಜಿ.ಎಸ್. ಮಂಜುನಾಥ್ ಮಾತನಾಡಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್ ಪೀರ್, ಮುಖಂಡರಾದ ಜಯಮ್ಮ ಬಾಲರಾಜ್, ಜಿ.ಎಸ್. ಕುಮಾರಗೌಡ, ಎಚ್.ಟಿ. ನಾಗೀರೆಡ್ಡಿ, ಜಿ. ಕೃಷ್ಣಮೂರ್ತಿ, ನಾಗಸಮುದ್ರ ಗೋವಿಂದಪ್ಪ, ಟಿ.ಕೆ. ಕಲೀಂವುಲ್ಲಾ, ಎಸ್. ಖಾದರ್ ಸೇರಿದಂತೆ ಹಲವರು ಇದ್ದರು.

### ಗಾರ್ಮೆಂಟ್ಸ್‌ನಲ್ಲಿ ಮತದಾನ ಜಾಗೃತಿ



» **ಚಿತ್ರದುರ್ಗ**

ಮಹಿಳಾ ಸಬಲೀಕರಣಕ್ಕಾಗಿ ನನ್ನ ಮತ, ನನ್ನ ಹಕ್ಕು ಎಂಬ ಘೋಷ ವಾಕ್ಯದೊಂದಿಗೆ ಎಲ್ಲಾ ಮಹಿಳೆಯುರು ತಪ್ಪದೇ ಮತದಾನ ಮಾಡಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಹಾಗೂ ಜಿ.ಪಂ.ಸಿಇಓ ಎಸ್. ಜೆ ಸೋಮಶೇಖರ್ ಕರೆ ನೀಡಿದರು.

ಶನಿವಾರ ನಗರದ ಭೀಮಸಮುದ್ರ ರಸ್ತೆಯಲ್ಲಿರುವ ಅರವಿಂದ ಗಾರ್ಮೆಂಟ್ಸ್‌ನಲ್ಲಿ ಏರ್ಪಡಿಸಲಾದ ಮತದಾನ ಜಾಗೃತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಹಿಳೆಯರು ಕಡ್ಡಾಯವಾಗಿ ಮತದಾನ ಮಾಡಬೇಕು ಜೊತೆಗೆ ಕುಟುಂಬದ ವರ್ಗದವರು ಪೋಷಕರು, ಸ್ನೇಹಿತರು, ಬಂಧುಗಳಿಗೆ ಮತದಾನ ಮಾಡುವಂತೆ ಪ್ರೇರೆಪಿಸಬೇಕು. ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಏಪ್ರಿಲ್ 26 ರಂದು ಮತದಾನ ನಡೆಯಲಿದೆ. ಇದು ಪ್ರಜಾಪ್ರಭುತ್ವ ಹಬ್ಬವಿದ್ದಂತೆ ಎಲ್ಲರು ಪಾಲ್ಗೊಳ್ಳಬೇಕು. ಇದು ತಮ್ಮ ಮತದಾನ ಹಕ್ಕು ಚಲಾಯಿಸಲು ಸುವರ್ಣ ಅವಕಾಶ, ಪ್ರತಿ 5 ವರ್ಷಕೊಮ್ಮೆ ಬರುವ ಈ ಹಬ್ಬದಲ್ಲಿ ಮತದಾರರ ಪಟ್ಟಿಯಲ್ಲಿ ಹೆಸರುಳ್ಳ 18 ವರ್ಷ ತುಂಬಿದ ಪುರುಷ ಮತ್ತು ಮಹಿಳೆಯರು ಹಾಗೂ ಎಲ್ಲಾ ವರ್ಗದವರಿಗೂ ಲಿಂಗಭೇದ ಇಲ್ಲದೆ ಮತದಾನ ಮಾಡಲು ಅವಕಾಶವಿದೆ ಎಂದರು.

ಕುಟುಂಬದ ಮತದಾರರು ಮತ ಹಾಕುವಂತೆ ಜಾಗೃತಿ ಮೂಡಿಸುವುದು ಮಹಿಳಾ ಮತದಾರರ ಕೈಯಲ್ಲಿದೆ. ಯಾವುದೇ ಭಯ ಪಡೆದೇ ನಿರ್ಭಿತಿಯಿಂದ ಮತಗಟ್ಟೆಗೆ ಬಂದು ಕಡ್ಡಾಯವಾಗಿ ಮತದಾನ ಮಾಡುವಂತೆಯುವ ಮಹಿಳಾ ಕಾರ್ಮಿಕರಿಗೆ ಜಾಗೃತಿಯನ್ನು ಮೂಡಿಸಿದರು. ನಂತರ ಮತದಾರ ಪ್ರತಿಜ್ಞಾ ವಿಧಿ ಭೋದಿಸಿದರು.

ಮತದಾರರ ಜಾಗೃತಿ ಕಾರ್ಯಕ್ರಮದಲ್ಲಿ ಜಿ.ಪಂ. ಉಪ ಕಾರ್ಯದರ್ಶಿ ಕೆ. ತಿಮಪ್ಪ, ಗಾರ್ಮೆಂಟ್ಸ್ ಅಧಿಕಾರಿಗಳು, ಸಿಬ್ಬಂದಿ ಮತ್ತು ಗಾರ್ಮೆಂಟ್ಸ್‌ನ ಮಹಿಳಾ ಕಾರ್ಮಿಕರು ಭಾಗವಹಿಸಿದ್ದರು.

## ತುರುವನೂರು ಹೋಬಳಿ ಮಟ್ಟದ ಚುನಾವಣಾಧಿಕಾರಿ ಕಟ್ಟುನಿಟ್ಟಿನ ನಿರ್ದೇಶನ ನೀಡಿದ ಬಿ.ಆನಂದ

» **ಚಳ್ಳಕೆರೆ**

ಚಿತ್ರದುರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಬಿ.ಆನಂದ ಚಿತ್ರದುರ್ಗ ತಾಲ್ಲೂಕು ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ತುರುವನೂರು ಹೋಬಳಿ ವ್ಯಾಪ್ತಿಯ ಇಒ, ಪಿಡಿಒ, ಗ್ರಾಮಲೆಕ್ಕಾಧಿಕಾರಿ ಹಾಗೂ ಸೆಕ್ಟರ್ ಅಧಿಕಾರಿಗಳ ಸಭೆಯಲ್ಲಿ ಮೂಲಭೂತ ಸೌಕರ್ಯಗಳ ವ್ಯವಸ್ಥೆ ಕುರಿತು ಕೂಲಂಕುಷವಾಗಿ ಚರ್ಚೆ ನಡೆಸಿದರು.

ಏ.26ರ ಶುಕ್ರವಾರ ಮತದಾನ ನಡೆಯಲಿದ್ದು, ತುರುವನೂರು ಹೋಬಳಿ ವ್ಯಾಪ್ತಿಯ ಎಲ್ಲಾ ಮತಗಟ್ಟೆಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯ ಒದಗಿಸಬೇಕು. ವಿಶೇಷವಾಗಿ ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳಲ್ಲಿ ಶೌಚಾಲಯ,ಬೆಳಕು, ಕುಡಿಯುವ ನೀರು ಮುಂತಾದ ಸೌಲಭ್ಯಗಳನ್ನು ಸಮರ್ಪಕವಾಗಿ ಸಂಬಂಧಪಟ್ಟ ಅಧಿಕಾರಿಗಳು ನಿರ್ವಹಿಸಬೇಕು. ಯಾವುದೇ ಲೋಪವಾಗದಂತೆ ಈಗಿನಿಂದಲೇ ಎಚ್ಚರಿಕೆ ವಹಿಸಬೇಕು, ಯಾವುದೇ ಸಮಸ್ಯೆ ನಿಮ್ಮಿಂದ ಇತ್ಯರ್ಥವಾಗದೇ ಇದ್ದಲ್ಲಿ ನಮ್ಮ ಗಮನಕ್ಕೆ ತರಬೇಕು. ಒಟ್ಟಿನಲ್ಲಿ ಮತದಾನ ಪ್ರಕ್ರಿಯೆ ಸಂದರ್ಭದಲ್ಲಿ ಅನಗತ್ಯ ವಿವಾದ ಉಂಟಾಗದಂತೆ ಜಾಗ್ರತೆ ವಹಿಸಿ, ಈ ನಿಟ್ಟಿನಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಕೆಲಸ ನಿರ್ವಹಿಸಬೇಕಿದೆ. ಈಗಾಗಲೇ ಸಾಕಷ್ಟು ಚುನಾವಣೆಗಳಲ್ಲಿ ಕಾರ್ಯನಿರ್ವಹಿಸಿದ ನಿಮಗೆ ಹೆಚ್ಚು ಅನುಭವವಿದೆ. ನಿಮ್ಮ ಪಾಲಿನ ಕರ್ತವ್ಯವನ್ನು ಸರಿಯಾದ ರೀತಿಯಲ್ಲೇ ಮಾಡಿದಲ್ಲಿ ಯಾವುದೇ ಸಮಸ್ಯೆ ಉಂಟಾಗದು ಎಂದರು.

ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಅನಂತರಾಜ್‌ಮಾತನಾಡಿ, ಲೋಕಸಭೆ ಚುನಾವಣೆಗೆ ಸಂಬಂಧಪಟ್ಟಂತೆ ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ತುರುವನೂರು ಹೋಬಳಿಯಲ್ಲಿ ಒಟ್ಟು 5 ಗ್ರಾಮ ಪಂಚಾಯಿತಿಗಳು ಈ ವ್ಯಾಪ್ತಿಗೆ ಸೇರಿವೆ. ಈಗಾಗಲೇ ನಿಯೋಜನೆಗೊಂಡ ಅಧಿಕಾರಿಗಳು, ಸಿಬ್ಬಂದಿ ವರ್ಗ ಮತದಾನಕ್ಕೆ ಬೇಕಾಗುವ ಎಲ್ಲಾ ಸಿದ್ದತೆಗಳನ್ನು ಸಮಾರೋಪಧಿಯಲ್ಲಿ ಕೈಗೊಂಡು ಪೂರೈಸಿದ್ದಾರೆ.

**ಪ್ರಮುಖ ಸುದ್ದಿ**

# ಬಿಜೆಪಿ ಬಡವರ ಪರವಾಗಿ ಯಾವ ಕೆಲಸ ಮಾಡಿಲ್ಲ: ಜಗದೀಶ್

» **ಚಿತ್ರದುರ್ಗ**

ಭಾರತೀಯ ಜನತಾ ಪಾರ್ಟಿ ತನ್ನ ಮುಂದೆ ಯಾರು ಸಹಾ ಬೆಳೆಯಬಾರದೆಂದು ವಿವಿಧ ರೀತಿಯ ತಂತ್ರಗಳನ್ನು ಬಳಸಿ ಅವರನ್ನು ಕಟ್ಟಿ ಹಾಕುವ ಕಾರ್ಯವನ್ನು ಮಾಡುತ್ತಿದೆ ಎಂದು ಆಮ್ ಆದ್ಮಿ ಪಾರ್ಟಿಯ ಜಿಲ್ಲಾಧ್ಯಕ್ಷ ಜಗದೀಶ್ ಆರೋಪಿಸಿದ್ದಾರೆ.

ದೆಹಲಿ ಮುಖ್ಯಮಂತ್ರಿ ಅರವಿಂದ ಕ್ರೇಜಿವಾಲ್‌ರವರನ್ನು ಇಡಿ ಮೂಲಕ ಬಂಧಿಸಿದ ಹಿನ್ನಲೆಯಲ್ಲಿ ಅವರ ಬಿಡುಗಡೆಗೆ ಆಗ್ರಹಿಸಿ ಭಾನುವಾರ ತಮ್ಮ ಪಕ್ಷದ ಕಚೇರಿ ಬಳಿ ಒಂದು ದಿನದ ಉಪವಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಸಮಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಅಧಿಕಾರದಲ್ಲಿರುವ ಸಮಯ ಯಾರಿಗೂ ಸಹಾ ನೆಮ್ಮದಿ ಇಲ್ಲದಂತಾಗಿದೆ. ಬಡವರ ಪರವಾಗಿ ಯಾವ ಕೆಲಸವನ್ನು ಸಹಾ ಮಾಡದೇ ಶ್ರೀಮಂತರ ಪರವಾದ ಕಾನೂನುಗಳನ್ನು ರೂಪಿಸುವುದರ ಮೂಲಕ ಅವರಿಗೆ ನೆರವಾಗುತ್ತಿದೆ ಎಂದು ದೂರಿದರು.

ಕ್ರೇಜಿವಾಲ್‌ರವರನ್ನು ಬಿಜೆಪಿ ಈಡಿ ಮೂಲಕ ಬಂಧಿಸುವುದರ ಮೂಲಕ ತಮ್ಮ ಪಕ್ಷವನ್ನು ತುಳಿಯುವ ಕಾರ್ಯವನ್ನು



ಮಾಡುತ್ತಿದೆ. ಇದು ಕಾರ್ಯಕರ್ತರಿಗೆ ಅಸಮಾಧಾನವಾಗಿದೆ. ದೇಶದಲ್ಲಿ ಬಿಜೆಪಿ ಸಂವಿಧಾನವನ್ನು ತಿರುಚುವ ಕಾರ್ಯಕ್ಕೆ ಮುಂದಾಗಿದೆ. ಸಂವಿದಾನ ವಿರೋಧಿ ಕೆಲಸವನ್ನು ಮಾಡುತ್ತಾ ಬಂದಿದೆ. ಚಂಢಿಗಢ ಮೇಯರ್ ಚುನಾವಣೆಯಲ್ಲಿ ಅಧಿಕಾರಿಗಳನ್ನು ಬಳಸಿಕೊಂಡು ನಮ್ಮ ಪಕ್ಷದವರು ಮೇಯರ್ ಆಗಬೇಕಿತ್ತು ಅದನ್ನು ತಿರುಚಿ ಬಿಜೆಪಿ ಪಕ್ಷದವರು ಮೇಯರ್ ಆಗುವಂತೆ ಮಾಡಿದ್ದಾರೆ. ದೇಶ ಬೇರೆ ದೇಶದ ಪ್ರಧಾನ ಮಂತ್ರಿಗಳಂತೆ ಆಡಳಿತ ನಡೆಸಿ ತದ ನಂತರ ಜೈಲಿಗೆ ಹಾಕುತ್ತಾರೆ ಅದೇ ರೀತಿ ನಮ್ಮಲ್ಲಿಯೂ ಆಗುತ್ತಿದೆ ಎಂದು ಆರೋಪಿಸಿದರು.

ಎಲೋಕ್ಟ್ರೋ ಬಾಂಡ್ ಮೂಲಕ ಬ್ಯಾಂಕ್ ಗಳಲ್ಲಿ ಸಾಮಾನ್ಯ ಜನರಿಗೆ ಒಂದು ಆಧಿಕಾರವಾದರೆ ಶ್ರೀಮಂತರಿಗೆ ಮತ್ತೊಂದು ರೀತಿಯಲ್ಲಿ ಅಧಿಕಾರವನ್ನು ಎಲೋಕ್ಟ್ರೋ ಬಾಂಡ್‌ಗಳ ಮೂಲಕ ನೀಡಲಾಗುತ್ತಿದೆ ಇದರಿಂದ ತಮ್ಮ ಪಕ್ಷದ ಫಂಡ್‌ನ್ನು ಹೆಚ್ಚಳ ಮಾಡಿಕೊಳ್ಳಲಾಗುತ್ತಿದೆ. ಬಿಜೆಪಿ ಪಕ್ಷವನ್ನು ಬೆಂಬಲಿಸುವ ಶ್ರೀಮಂತ ವರ್ಗದವರು ಈ ರೀತಿಯಾದ ಬಾಂಡ್ ಗಳನ್ನು ಖರೀದಿ ಮಾಡುವುದರ ಮೂಲಕ ತಮ್ಮ ಬಳಿಯಲ್ಲಿನ ಬ್ಲಾಕ್ ಹಣವನ್ನು ವೈಟ್ ಮಾಡಿಕೊಳ್ಳುವುದರ ಮೂಲಕ ದೇಣಿಗೆಯನ್ನು ನೀಡುತ್ತಿದ್ದಾರೆ. ಬಿಜೆಪಿ ಸರ್ಕಾರ ಬ್ರಷ್ಟಾಚಾರ ಮುಕ್ತ ದೇಶವನ್ನಾಗಿ ಮಾಡುತ್ತೇವೆ ಎಂದು ಭಾಷಣದಲ್ಲಿ ಹೇಳುತ್ತಾರೆ ಆದರೆ ಮಾಡುವುದು ಮಾತ್ರ ಇಂತಹ ಕೆಲಸವಾಗಿದೆ. ಇದರಿಂದ ಬ್ರಷ್ಟಾಚಾರ ಮುಕ್ತ ದೇಶವಾಗದೇ ಭಷ್ಟ್ರಚಾರದಿಂದ ಕೂಡಿದ ದೇಶವಾಗುತ್ತಿದೆ ಎಂದರು.ಕಾಂಗ್ರೆಸ್ ಪಕ್ಷದವರು ಈ ರೀತಿಯಾದ ಕೆಲಸವನ್ನು ಮಾಡಿಲ್ಲ ಅಲ್ಲದೆ ಸಂವಿಧಾನವನ್ನು ತಿರುಚುವ ಕಾರ್ಯಕ್ಕೆ ಸಹಾ ಮುಂದಾಗಿಲ್ಲ ಸಂವಿಧಾನ ಹಸ್ತಕ್ಷೇಪ ಮಾಡಿಲ್ಲ, ದೇಶದಲ್ಲಿನ ಎಲ್ಲಾ ಭ್ರಷ್ಠರು ಬಿಜೆಪಿಯಲ್ಲಿ ಇದ್ದಾರೆ. ಬಿಜೆಪಿ ದೊಡ್ಡ ಭ್ರಷ್ಟಾಚಾರ ಪಕ್ಷವಾಗಿ ಹೊರ ಹೊಮ್ಮುತ್ತಿದೆ. ಮುಂದಿನ ದಿನದಲ್ಲಿ ಬಿಜೆಪಿ ಕೈಗೆ ದೇಶವನ್ನು ನೀಡಿದರೆ ಯಾವ ಕಡೆಗೆ ತೆಗೆದುಕೊಂಡು ಹೋಗುತ್ತಾರೆ ಎಂದು ಆತಂಕ ಉಂಟಾಗಿದೆ ದೇಶದ ಮುಂದಿನ ಪ್ರಧಾನ ಮಂತ್ರಿಯಾಗಲು ಅರ್ಹತೆ ಇರುವವರು ಎಂದರೆ ಕ್ರೇಜಿವಾಲ ಮಾತ್ರ ಈ ಹಿನ್ನಲೆಯಲ್ಲಿ ಅವರನ್ನು ತುಳಿಯುವ ಕಾರ್ಯವನ್ನು ಬಿಜೆಪಿ ಮಾಡುತ್ತಿದೆ ಎಂದು ಜಗದೀಶ್ ಆರೋಪಿಸಿದರು.

ಈ ಉಪವಾಸ ಸತ್ಯಾಗ್ರಹದಲ್ಲಿ ಹೊಳಲ್ಕೆರೆ ತಾಲ್ಲೂಕು ರೈತ ಸಂಘದ ಅಧ್ಯಕ್ಷ ಮಲ್ಲಿಕಾರ್ಜನಪ್ಪ, ಜಿಲ್ಲಾ ಎಎಪಿ ಕಾರ್ಯದರ್ಶಿ ರಾಮಪ್ಪ, ಉಪಾಧ್ಯಕ್ಷ ಕುಬೇಂದ್ರಪ್ಪ ಪ್ರಧಾನ ಕಾರ್ಯದರ್ಶಿ ಲೋಕೇಶ್, ಅಲ್ಪಸಂಖ್ಯಾತರ ಘಟಕದ ತನ್ವೀರ್, ವೀರಣ್ಣ, ವಸಂತ, ಮಹಿಳಾ ಘಟಕದ ಅಧ್ಯಕ್ಷೆ ಜ್ಯೋತಿ, ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಭದ್ರಾ ನೀರು ಹರಿಸಲು ಕ್ರಮ ಕೈಗೊಳ್ಳಿ: ಭಗೀರಥ ಗುರುಪೀಠದ ಪುರುಷೋತ್ತಮಾನಂದ ಪುರಿ ಸ್ವಾಮೀಜಿ ಸಲಹೆ



» **ಹೊಸದುರ್ಗ**

ಜಿಲ್ಲೆಯಲ್ಲಿ ಲೋಕಾಸಭಾ ಚುನಾವಣೆಯಲ್ಲಿ ಯಾರೇ ಗೆದ್ದರೂ ಮೊದಲು ಭದ್ರೆಯನ್ನು ಹೊಸದುರ್ಗ ತಾಲ್ಲೂಕಿನಲ್ಲಿ ಹರಿಸುವ ಕೆಲಸ ಆಗಬೇಕು. ಈ ಭಾಗದ ಜನತೆಯ ನೀರಿನ ಬವಣೆ ನಿವಾರಿಸಬೇಕು ಎಂದು ಭಗೀರಥ ಗುರುಪೀಠದ ಪುರುಷೋತ್ತಮಾನಂದ ಪುರಿ ಸ್ವಾಮೀಜಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಗೋವಿಂದ್ ಕಾರಜೋಳ ಅವರಿಗೆ ಸಲಹೆ ನೀಡಿದರು. ಭಗೀರಥ ಗುರುಪೀಠಕ್ಕೆ ಶನಿವಾರ ರಾತ್ರಿ ಚಿತ್ರದುರ್ಗ ಲೋಕಸಭಾ ಅಭ್ಯರ್ಥಿ ಗೋವಿಂದ್ ಕಾರಜೋಳ ಭೇಟಿ ನೀಡಿದ ಸಂದರ್ಭದಲ್ಲಿ ಅವರಿಗೆ ಆರ್ಶೀವಾದ ನೀಡಿ ಮಾತನಾಡಿದರು. ತಾಲ್ಲೂಕಿನಾದ್ಯಂತ ತೋಟಗಾರಿಕೆ ಬೆಳೆಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಸಂಪೂರ್ಣ ಬರಗಾಲ ಆವರಿಸಿದ್ದು ರೈತರು ಆತಂಕದಲ್ಲಿದ್ದಾರೆ. ಈ ನಿಟ್ಟಿನಲ್ಲಿ ಮೊದಲು ಕೆರೆಗಳಿಗೆ ನೀರು ತುಂಬಿಸುವ ಕಾರ್ಯವಾಗಬೇಕು. ರೈತ ಚೆನ್ನಾಗಿದ್ದರೆ ನಾವೆಲ್ಲಾ ಚೆನ್ನಾಗಿದ್ದಂತೆ. ಹಿಂದಿದ ವರ್ಗಗಳ ಅಭಿವೃದ್ಧಿ ಹಾಗೂ ಜಿಲ್ಲೆಯ ಅಭಿವೃದ್ಧಿಗೆ ಸಂಪೂರ್ಣವಾಗಿ ತೊಡಗಿಸಿಕೊಳ್ಳಿ ಎಂದು ಸಲಹೆ ನೀಡಿದರು. ಇದೇ ವೇಳೆ ಬಿಜೆಪಿ ಮುಖಂಡ ಉದ್ಯಮಿ ಡಿ.ಎಸ್. ಪ್ರದೀಪ್, ಬಿಜೆಪಿ ಮುಖಂಡರುಗಳಾದ ಆರ್. ಹನುಮಂತಪ್ಪ, ದೊಡ್ಡಘಟ್ಟ ಲಕ್ಷ್ಮಣ್, ಹೆಬ್ಬಳ್ಳಿ ಮಲ್ಲಿಕಾರ್ಜುನ್, ಕೊಂಡಾಪುರ ಮಂಜುನಾಥ್, ಕೋಡಿಹಳ್ಳಿ ತಮ್ಮಣ್ಣ, ಮಾವಿನಕಟ್ಟೆ ಗುರುಸ್ವಾಮಿ, ಜಗದೀಶ್ ರಾಮಯ್ಯ, ಹೆಗ್ಗೆರೆ ಶಂಕರಪ್ಪ, ಕಪ್ಪಕೆರೆ ನಾಗರಾಜ್, ಕೆ.ಎಸ್. ಕಲ್ಮಠ್, ಲಿಂಗದೇವರು, ದೇವಿಗೆರೆ ಮಲ್ಲಿಕಾರ್ಜುನ್ ಸೇರಿದಂತೆ ಹಲವರಿದ್ದರು. ಹೊಸದುರ್ಗದ ಭಗೀರಥ ಗುರುಪೀಠಕ್ಕೆ ಲೋಕಸಭಾ ಅಭ್ಯರ್ಥಿ ಗೋವಿಂದ್ ಕಾರಜೋಳ ಭೇಟಿ ನೀಡಿ ಪುರುಷೋತ್ತಮಾನಂದಪುರಿ ಸ್ವಾಮೀಜಿ ಅವರ ಆರ್ಶೀವಾದ ಪಡೆದರು.

### ಬಾಬು ಜಗಜೀವನ್ ರಾಂ ಜಯಂತಿ ಆಚರಣೆ



» **ದಾವಣಗೆರೆ**

ಹಸಿರು ಕ್ರಾಂತಿಯ ಹರಿಕಾರ, ರಾಷ್ಟ್ರನಾಯಕ, ಭಾರತದ ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನ್ ರಾಂ ಅವರ ಜಯಂತಿಯ ಮೂಲಕ ಅವರ ಆದರ್ಶವನ್ನು ನಾವೆಲ್ಲಾ ಪಾಲಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ.ಎಂ.ವಿ ಹೇಳಿದರು. ಜಿಲ್ಲಾಡಳಿತ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಮತ್ತು ಮಹಾನಗರಪಾಲಿಕೆ, ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾದ ಡಾ. ಬಾಬು ಜಗಜೀವನ್ ರಾಂ ಅವರ 117ನೇ ಜಯಂತಿಯ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಮಾತಾನಾಡಿದರು. ಡಾ. ಬಾಬು ಜಗಜೀವನ್ ರಾಂ ಅವರು ನೆಹರು ಅವರ ಮಂತ್ರಿಮಂಡಲದಲ್ಲಿ ಸಚಿವರಾಗಿದ್ದರು. ಮೊರಾರ್ಜಿ ದೇಸಾಯಿಯವರ ಕಾಲದಲ್ಲಿ ಭಾರತದ ಉಪಪ್ರಧಾನಿಯೂ ಆಗಿದ್ದರು. ಜಗಜೀವನ್ ರಾಂ ರವರು ಅಸ್ಪ್ರಶ್ಯತಾ ನಿವಾರಣೆ ಹೋರಾಟದ ಮಹಾನ್ ನಾಯಕರಾಗಿದ್ದರು. ನಮ್ಮ ದೇಶಕ್ಕೆ ತನ್ನದೇ ಆದ ಪ್ರಾಮಾಣಿಕ ಸೇವೆ ಸಲ್ಲಿಸಿ 50 ವರ್ಷಗಳ ಕಾಲ ದೇಶ ಸೇವೆ ಮಾಡಿದವರು.

1971ರಲ್ಲಿ ಪಾಕಿಸ್ತಾನದ ವಿರುದ್ದದ ಯುದ್ದದ ಸಮಯದಲ್ಲಿ ಕೇಂದ್ರ ರಕ್ಷಣಾ ಸಚಿವರಾಗಿಯೂ ಕಾರ್ಯ ನಿರ್ವಹಿಸಿದ್ದರು. ಭಾರತ–ಪಾಕಿಸ್ತಾನ ಯುದ್ದದಲ್ಲಿ ದಿಗ್ವಿಜಯ ಸಾಧಿಸುವಲ್ಲಿ ಪ್ರಮುಖ ಪಾತ್ರವಹಿಸಿದ್ದರು. ಹಲವು ಇಲಾಖೆಗಳಲ್ಲಿ ಅವರದೇ ಆದ ಚಾಪು ಮೂಡಿಸಿದ್ದಾರೆ. ಅವರು ಸಮಾಜಕ್ಕೆ ನೀಡಿರುವ ಕೊಡುಗೆ ಅಪಾರವಾಗಿದ್ದು, ಇಂಡೋ–ಪಾಕ್ ಯುದ್ದದ ಸಂದರ್ಭದಲ್ಲಿ ದೇಶಕ್ಕೆ ಅವರ ಕೊಡುಗೆ ಗಣನೀಯವಾದದ್ದು, ಅವರ ಹಾದಿಯಲ್ಲಿ ನಾವೆಲ್ಲರು ಸಾಗಿ ಶೋಷಿತ ವರ್ಗದ ಜನರಿಗೆ ಸಹಾಯ ಮಾಡಬೇಕಿದೆ. ಇವರು ಹಾಕಿಕೊಟ್ಟ ಮಾರ್ಗದಲ್ಲಿ ನಾವೆಲ್ಲ ನಡೆಯೋಣ ಎಂದರು. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ ಪ್ರಾಸ್ತಾವಿಕ ನುಡಿಗಳಾನ್ನಾಡಿದರು.

**ಮತದಾನ ಜಾಗೃತಿ ಸಂಬಂಧ ವಿಕಲಚೇತನರ ಬೈಕ್ ರ್‍ಯಾಲಿಗೆ ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ಚಾಲನೆ**

# ಗಮನ ಸೆಳೆದ ವಿಕಲಚೇತನರ ಬೈಕ್ ರ್‍ಯಾಲಿ




» **ಚಿತ್ರದುರ್ಗ**

ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಸಂಬಂಧ ಮತದಾನದ ಬಗ್ಗೆ ಅರಿವು ಮೂಡಿಸಲು ಗ್ರಾಮೀಣ, ನಗರ ಹಾಗೂ ತಾಲ್ಲೂಕು ವಿವಿದ್ಧೋದ್ದೇಶ ಪುನರ್ವಸತಿ ಕಾರ್ಯಕರ್ತರು ಹಾಗೂ ವಿಕಲಚೇತನರಿಂದ ಏರ್ಪಡಿಸಿದ್ದ ವಿಕಲಚೇತನರ ಬೈಕ್ ರ್‍ಯಾಲಿ ಗಮನ ಸೆಳೆಯಿತು.

ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಮೀಪದ ಓನಕೆ ಓಬವ್ವ ವೃತ್ತದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ, ತಾಲ್ಲೂಕು ಆಡಳಿತ, ತಾಲ್ಲೂಕು ಸ್ವೀಪ್ ಸಮಿತಿ ಹಾಗೂ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಸಹಯೋಗದಲ್ಲಿ ಲೋಕಸಭಾ ಸಾರ್ವತ್ರಿಕ ಚುನಾವಣೆ–2024 ಅಂಗವಾಗಿ ಮತದಾನ ಜಾಗೃತಿ ಸಂಬಂಧ ಹಮ್ಮಿಕೊಂಡಿದ್ದ ವಿಕಲಚೇತನರ ಬೈಕ್ ರ್‍ಯಾಲಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ಎಸ್.ಜೆ.ಸೋಮಶೇಖರ್ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು. ವಿಕಲಚೇತನರ ಬೈಕ್ ರ್‍ಯಾಲಿಗೆ ಚಾಲನೆ ನೀಡಿ ಮಾತನಾಡಿದ ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್, ಕಡಿಮೆ ಮತದಾನವಾಗಿರುವ ಪ್ರದೇಶಗಳಲ್ಲಿ ಹಾಗೂ ಅರ್ಹ ಮತದಾರರು ಯಾರೂ ಕೂಡ ಮತದಾನ ಪ್ರಕ್ರಿಯೆಯಿಂದ ಹೊರಗುಳಿಯಬಾರದು ಎಂಬ ಹಿನ್ನಲೆಯಲ್ಲಿ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾನದ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ.

ಅಂಗವಿಕಲ ಮತದಾರರು, ಯುವ ಮತದಾರರು, ಮಹಿಳಾ ಮತದಾರರು ಸೇರಿದಂತೆ ಪ್ರತಿಯೊಬ್ಬ ಅರ್ಹ ಮತದಾರರು ಮತದಾನ ಪ್ರಕ್ರಿಯೆಯಿಂದ ಹೊರಗುಳಿಯದಂತೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜಾಗೃತಿ ಮೂಡಿಸಲಾಗುತ್ತಿದ್ದು, ಕಡ್ಡಾಯವಾಗಿ ಮತದಾನ ಮಾಡುವಂತೆ ಪ್ರೇರೇಪಿಸಲಾಗುತ್ತಿದೆ ಎಂದರು. ಇದೇ ಏಪ್ರಿಲ್ 26ರಂದು ನಡೆಯುವ ಲೋಕಸಭಾ ಸಾರ್ವತ್ರಿಕ ಚನಾವಣೆಯಲ್ಲಿ ಮತದಾರರು ಯಾವುದೇ ಆಮಿಷಕ್ಕೆ ಒಳಗಾಗದೇ ತಮ್ಮ ಮತಗಟ್ಟೆಗಳಿಗೆ ತೆರಳಿ ಕಡ್ಡಾಯವಾಗಿ ಮತ ಚಲಾಯಿಸುವ ಮೂಲಕ ಪ್ರಜಾಪ್ರಭುತ್ವದ ಹಬ್ಬದಲ್ಲಿ ಎಲ್ಲರೂ ಭಾಗಿಯಾಗಿ ಪ್ರಜಾಪ್ರಭುತ್ವ ಸದೃಢಗೊಳಿಸಬೇಕು ಎಂದರು. ಚಿತ್ರದುರ್ಗ ನಗರದ ಒನಕೆ ಓಬವ್ವ ವೃತ್ತದಿಂದ ಆರಂಭವಾದ ವಿಕಲಚೇತನರ ಬೈಕ್ ರ್‍ಯಾಲಿಯು, ಮದಕರಿ ನಾಯಕ ವೃತ್ತ, ಅಂಬೇಡ್ಕರ್ ವೃತ್ತ, ಮಹಾವೀರ ವೃತ್ತ, ಎಸ್‌ಬಿಎಂ ವೃತ್ತ, ಗಾಂಧಿ ವೃತ್ತದ ಮೂಲಕ ಸಂಗೊಳ್ಳಿ ರಾಯಣ್ಣ ವೃತ್ತ, ಕನಕ ವೃತ್ತದವರೆಗೂ ಬೈಕ್ ರ್‍ಯಾಲಿ ಜಾಥಾ ಸಂಚರಿಸಿ, ನಂತರ ಪುನಃ ಒನಕೆ ವೃತ್ತ ತಲುಪಿತು. ನಂತರ ಜಿಲ್ಲಾಧಿಕಾರಿ ಕಚೇರಿ ಸಮೀಪದ ಒನಕೆ ಓಬವ್ವ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ, ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಿ ಪ್ರಜಾಪ್ರಭುತ್ವ ಬಲಗೊಳಿಸಿ, ಕಾಡು ರಕ್ಷಣೆಗೆ ಬದ್ಧರಾಗೋಣ ಮತ ಹಾಕಲು ಸಿದ್ಧರಾಗೋಣ, ಓದು ವ್ಯಕ್ತಿತ್ವವನ್ನು ರೂಪಿಸುತ್ತದೆ. ಮತದಾನ ದೇಶವನ್ನು ರೂಪಿಸುತ್ತೆದೆ. ಮತದಾನ ಮಾಡುವುದು ಪ್ರತಿಯೊಬ್ಬರ ಹಕ್ಕಾಗಿರಲಿ, ಮತದಾನ ಮಾಡುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯ, ನನ್ನ ದೇಶ ನನ್ನ ಹಕ್ಕು, ನನ್ನ ಮತ ನನ್ನ ಹಕ್ಕು, ಮತದಾನಕಿಂತ ಇನ್ನೊಂದಿಲ್ಲ ನಾನು ಖಚಿತವಾಗಿ ಮತದಾನ ಮಾಡುವೇ, ಜಾಗೃತ ಮತದಾರ ಪ್ರಜಾಪ್ರಭುತ್ವದ ನೇತಾರ, ನಮ್ಮ ಮತ ಅಮೂಲ್ಯವಾದದ್ದು ಬನ್ನಿ ಮತದಾನ ಕೇಂದ್ರಕ್ಕೆ, ಪ್ರಜಾಪ್ರಭುತ್ವದಲ್ಲಿ ಮತದಾನವೇ ಹಬ್ಬ, ಯೋಚಿಸಿ ಮತ ಹಾಕೋಣ ಅದರಲ್ಲೇ ದೇಶದ ಹಿತ ಕಾಯೋಣ, ಇದೇ ಏಪ್ರಿಲ್ 26ರಂದು ಶುಕ್ರವಾರ ತಪ್ಪದೇ ಎಲ್ಲರೂ ಮತದಾನ ಮಾಡಬೇಕು ಎಂದು ಸಂದೇಶ ಸಾರುವುದರ ಮೂಲಕ ಮತದಾನ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ಸಹಾಯಕ ಚುನಾವಣಾಧಿಕಾರಿ ಹಾಗೂ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ತಿಮ್ಮಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಎಂ.ವಿ.ವೀಣಾ, ತಾಲ್ಲೂಕು ಪಂಚಾಯಿತಿ ಇಒ ಅನಂತ ರಾಜು, ಸಹಾಯಕ ನಿರ್ದೇಶಕ ಯರ್ರಿಸ್ವಾಮಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸುಧಾ, ಜಿಲ್ಲಾ ಸ್ವೀಪ್ ಸಮಿತಿ ಸಂಯೋಜಕಿ ಸುಷ್ಮಾರಾಣಿ, ಎಂ.ಆರ್.ಡಬ್ಲ್ಯೂ ಎನ್.ಮೈಲಾರಪ್ಪ ಸೇರಿದಂತೆ ವಿ.ಆರ್.ಡಬ್ಲ್ಯೂ, ಯು.ಆರ್.ಡಬ್ಲ್ಯೂ ಹಾಗೂ ವಿಕಲಚೇತನರು ಇದ್ದರು.



**ಕೋಟೆನಾಡು ಚಿತ್ರದುರ್ಗದಲ್ಲಿ ಇಂದು ವಕೀಲರನ್ನು ಕಾಂಗ್ರೆಸ್ ಲೋಕಸಭಾ ಅಭ್ಯರ್ಥಿಯಾದ ಶ್ರೀ ಬಿ.ಎನ್. ಚಂದ್ರಪ್ಪ ರವರು ಭೇಟಿ ಮಾಡಿ ಮತಯಾಚನೆ ಮಾಡಿದರು. ಈ ವೇಳೆ ವಕೀಲರ ಸಂಘದ ಅಧ್ಯಕ್ಷರಾದ ಶ್ರೀ ತಿಪ್ಪೇಸ್ವಾಮಿ ರವರು, ಮಾಜಿ ಅಧ್ಯಕ್ಷರಾದ ಶ್ರೀ ಶಿವು ಯಾದವ್ ರವರು, ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಗಂಗಾಧರ್ ರವರು, ಕಾಂಗ್ರೆಸ್ ಲೀಗಲ್ ಸೆಲ್ ಅಧ್ಯಕ್ಷರಾದ ಶ್ರೀ ಸುಂದರೇಶ್ ರವರು, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ಶ್ರೀ ತಾಜ್ ಪೀರ್ ರವರು ಸೇರಿದಂತೆ ಅನೇಕ ಮುಖಂಡರು ಭಾಗವಹಿಸಿದ್ದರು.**



**ಚಳ್ಳಕೆರೆ ನಗರದ ಮಾಜಿ ಶಾಸಕ ಜಿ. ಬಸವರಾಜ ಮಂಡಿಮಠರವರನ್ನು ಅವರ ನಿವಾಸದಲ್ಲಿ ಯುವ ಮುಖಂಡ ಕೆ.ಟಿ.ಕುಮಾರಸ್ವಾಮಿ ಭೇಟಿ ಮಾಡಿ ಆಶೀರ್ವಾದ ಪಡೆದರು. ಶೀಘ್ರದಲ್ಲೇ ಬಿಜೆಪಿ ಸೇರ್ಪಡೆಯಾಗುವ ಇಂಗಿತ ವ್ಯಕ್ತಪಡಿಸಿದರು.**




Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T